ಸಂಪುಟ 01 | ಸಂಚಿಕೆ 187 ಸೋಮವಾರ 14 ಸೆಪ್ಟೆಂಬರ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1. ರಾಷ್ಟ್ರೀಯ ಹಿಂದಿ ದಿವಸ್ (Hindi Diwas): 1949 ರ ಸೆಪ್ಟೆಂಬರ್ 14 ರಂದು ಭಾರತದ ಸಂವಿಧಾನ ಸಭೆಯು ದೇವನಾಗರಿ ಲಿಪಿಯ ಹಿಂದಿ ಭಾಷೆಯನ್ನು ಭಾರತದ ಅಧಿಕೃತ ರಾಜಭಾಷೆಯಾಗಿ ಅಂಗೀಕರಿಸಿತು.

2. ಹೋಲಿ ಕ್ರಾಸ್ ಡೇ (Feast of the Exaltation of the Holy Cross): ಕ್ರಿಶ್ಚಿಯನ್ ಸಮುದಾಯದಲ್ಲಿ ಸೆಪ್ಟೆಂಬರ್ 14 ರಂದು ಪವಿತ್ರ ಶಿಲುಬೆಯ ಹಬ್ಬವನ್ನು ಆಚರಿಸಲಾಗುತ್ತದೆ. ಜೀಸಸ್ ಕ್ರೈಸ್ತರನ್ನು ಮರಣದಂಡನೆಗೆ ಒಳಪಡಿಸಿದ ಶಿಲುಬೆಯ ಪತ್ತೆ ಮತ್ತು ರಕ್ಷಣೆಯ ನೆನಪಿಗಾಗಿ ಈ ಆಚರಣೆ ನಡೆಯುತ್ತದೆ.

ಸುಭಾಷಿತ

ಮುಕ್ತವಾದ ಮನಸ್ಸಿಲ್ಲದ ವ್ಯಕ್ತಿ ಬದುಕಿದ್ದರೂ ಸತ್ತಂತೆ.
ಮುಕ್ತವಾದ ಮನಸ್ಸು ವ್ಯಕ್ತಿಯೊಬ್ಬನ ಅಸ್ತಿತ್ವದ ಪ್ರತೀಕ.
–ಡಾ. ಬಿ.ಆರ್.ಅಂಬೇಡ್ಕರ್

SLPL ರೋಚಕ ಫೈನಲ್ ಪಂದ್ಯದಲ್ಲಿ ಎಕ್ಸಲೆಂಟ್ ರೈಡರ್ಸ್ ಚಾಂಪಿಯನ್

SND ಉಪನ್ಯಾಸಕರ ಕ್ರಿಕೆಟ್ ಫೈನಲ್ನಲ್ಲಿ ಕನಕದಾಸ ಬಿಗ್ ಬುಲ್ ಕಿಂಗ್ಸ್ ರನ್ನರ್ಸ್ ಅಪ್

❑ ನೈಜ್ಯ ದೇಸೆ ನ್ಯೂಸ್

1st Excellent



2nd Kanakadas-



ಸಿಂಧನೂರು: ಸಿಂಧನೂರು ಉಪನ್ಯಾಸಕರ ಕ್ರಿಕೆಟ್ ಬಳಗದ ವತಿಯಿಂದ ಆಯೋಜಿಸಲಾಗಿದ್ದ ಸಿಂಧನೂರು ಉಪನ್ಯಾಸಕರ ಕ್ರಿಕೆಟ್ ಲೀಗ್ ಸೀಸನ್ 4ರ ಫೈನಲ್ ಪಂದ್ಯವು ಅತ್ಯಂತ ರೋಚಕ ಹಾಗೂ ಕುತೂಹಲಭರಿತವಾಗಿ ನಡೆಯಿತು. ನಗರದ ಜೂನಿಯರ್ ಕಾಲೇಜು ಮೈದಾನದಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಶ್ರೀ ಕನಕದಾಸ ಬಿಗ್ ಬುಲ್ ಕಿಂಗ್ಸ್ ಹಾಗೂ ಎಕ್ಸಲೆಂಟ್ ರೈಡರ್ಸ್ ತಂಡಗಳು ಚಾಂಪಿಯನ್ ಪಟ್ಟಕ್ಕಾಗಿ ಸೆಣಸಾಡಿದವು.ಪಂದ್ಯದ ಆರಂಭದಿಂದಲೂ ಉಭಯ ತಂಡಗಳ ಆಟಗಾರರು ಉತ್ತಮ ಪ್ರದರ್ಶನ ನೀಡಿದ್ದು, ಪ್ರೇಕ್ಷಕರಲ್ಲಿ ಪಂದ್ಯಾವಳಿಯ ಬಗ್ಗೆ ಹೆಚ್ಚಿನ ಕುತೂಹಲ ಮೂಡಿಸಿತು. ಬ್ಯಾಟಿಂಗ್, ಬೌಲಿಂಗ್ ಹಾಗೂ ಫೀಲ್ಡಿಂಗ್‌ನಲ್ಲಿ ಎರಡೂ ತಂಡಗಳು ಸಮಬಲದ ಹೋರಾಟ ನೀಡಿದವು. ಅಂತಿಮ ಹಂತದವರೆಗೂ ಪಂದ್ಯವು ರೋಚಕತೆ ಉಳಿಸಿಕೊಂಡಿದ್ದು, ಕೊನೆಗೆ ಎಕ್ಸಲೆಂಟ್ ರೈಡರ್ಸ್ ತಂಡವು ಅತ್ಯುತ್ತಮ ಪ್ರದರ್ಶನ ನೀಡಿ ಜಯಭೇರಿ ಬಾರಿಸಿ ಸೀಸನ್ 4ರ ಚಾಂಪಿಯನ್ ಆಗಿ ಹೊರಹೊಮ್ಮಿತು.ಈ ಕ್ರೀಡಾಕೂಟವು ಕೇವಲ ಗೆಲುವು ಸೋಲಿನ ಪಂದ್ಯವಾಗಿರದೆ, ಸಿಂಧನೂರು ತಾಲೂಕಿನ ವಿವಿಧ ಕಾಲೇಜುಗಳ ಉಪನ್ಯಾಸಕರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಮೂಲಕ ಸ್ನೇಹ, ಸಹಕಾರ, ಕ್ರೀಡಾಸ್ಫೂರ್ತಿ ಮತ್ತು ಪರಸ್ಪರ ಬಾಂಧವ್ಯವನ್ನು ಗಟ್ಟಿಗೊಳಿಸುವ ಕಾರ್ಯಕ್ರಮವಾಗಿ ಗಮನ ಸೆಳೆಯಿತು.

❑ ಗಣ್ಯರ ಉಪಸ್ಥಿತಿ

ಸಿಂಧನೂರು ಉಪನ್ಯಾಸಕರ ಕ್ರಿಕೆಟ್ ಬಳಗದ ವತಿಯಿಂದ ಆಯೋಜಿಸಲಾದ ಈ ಸಮಾರೋಪ ಹಾಗೂ ಬಹುಮಾನ ವಿತರಣಾ ಕಾರ್ಯಕ್ರಮದಲ್ಲಿ ಸೋಮನಗೌಡ ಬಾದರ್ಲಿ ಸರ್, ಅಭಿಷೇಕ್ ನಾಡಗೌಡ ಸರ್, ರಾಜಶೇಖರ್ ಹಿರೇಮಠ ಸರ್, ಎಂ. ದೊಡ್ಡ ಬಸವರಾಜ್ ಸರ್ ಹಾಗೂ ಶ್ರೀ ಇರ್ಫಾನ್ ಕೆ. ಅತ್ತಾರ್ ಸರ್ ಸೇರಿದಂತೆ ವಿವಿಧ ಕಾಲೇಜುಗಳ ಉಪನ್ಯಾಸಕರು, ಕ್ರೀಡಾಭಿಮಾನಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಮಾತನಾಡಿದ ಗಣ್ಯರು, ಉಪನ್ಯಾಸಕರು ತಮ್ಮ ವೃತ್ತಿಪರ ಜವಾಬ್ದಾರಿಯನ್ನು ಅತ್ಯಂತ ಯಶಸ್ವಿಯಾಗಿ ನಿರ್ವಹಿಸುವುದರ ಜೊತೆಗೆ ಕ್ರೀಡೆ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ಪಾಲ್ಗೊಳ್ಳುತ್ತಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

* "ಉಪನ್ಯಾಸಕರ ಕ್ರೀಡಾ ಚಟುವಟಿಕೆಗಳಿಗೆ ಸದಾ ಬೆಂಬಲ"

ಕಾರ್ಯಕ್ರಮದಲ್ಲಿ ಮಾತನಾಡಿದ ಸೋಮನಗೌಡ ಬಾದರ್ಲಿ ಸರ್, ಉಪನ್ಯಾಸಕರ ಕ್ರೀಡಾ ಚಟುವಟಿಕೆಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿ, ಇಂತಹ ಕಾರ್ಯಕ್ರಮಗಳು ಉಪನ್ಯಾಸಕರಲ್ಲಿ ಹೊಸ ಉತ್ಸಾಹವನ್ನು ಮೂಡಿಸುವುದರ ಜೊತೆಗೆ ಪರಸ್ಪರ ಸ್ನೇಹ ಮತ್ತು ಬಾಂಧವ್ಯವನ್ನು ಬೆಳೆಸುತ್ತವೆ ಎಂದು ಹೇಳಿದರು."ಉಪನ್ಯಾಸಕರು ಆಯೋಜಿಸುವ ಇಂತಹ ಉತ್ತಮ ಕಾರ್ಯಕ್ರಮಗಳಿಗೆ ನಮ್ಮ ಸಂಪೂರ್ಣ ಬೆಂಬಲ ಮತ್ತು ಸಹಕಾರ ಸದಾ ಇರುತ್ತದೆ. ಉಪನ್ಯಾಸಕರು ಕ್ರೀಡೆ ಸೇರಿದಂತೆ ಯಾವುದೇ ಉತ್ತಮ ಕಾರ್ಯಗಳನ್ನು ಕೈಗೊಂಡರೂ ನಾವು ಅವರೊಂದಿಗೆ ಸದಾ ಇರುತ್ತೇವೆ" ಎಂದು ಭರವಸೆ ನೀಡಿದರು.



* "ಉಪನ್ಯಾಸಕರು ಪಾಠದ ಜೊತೆಗೆ ಆಟದಲ್ಲೂ ಮುಂದು"

ಇದೇ ಸಂದರ್ಭದಲ್ಲಿ ಮಾತನಾಡಿದ ಅಭಿಷೇಕ್ ನಾಡಗೌಡ ಸರ್, ಉಪನ್ಯಾಸಕರ ಕ್ರೀಡಾ ಪ್ರತಿಭೆಯನ್ನು ಶ್ಲಾಘಿಸಿದರು."ಉಪನ್ಯಾಸಕರು ಕೇವಲ ವಿದ್ಯಾರ್ಥಿಗಳಿಗೆ ಪಾಠ ಮಾಡುವುದಕ್ಕೆ ಮಾತ್ರ ಸೀಮಿತರಾಗಿಲ್ಲ. ಅವರು ಉತ್ತಮ ಕ್ರೀಡಾಪಟುಗಳಾಗಿಯೂ ತಮ್ಮ ಪ್ರತಿಭೆಯನ್ನು ಪ್ರದರ್ಶಿಸುತ್ತಿರುವುದು ಸಂತಸದ ಸಂಗತಿ. ಇಂತಹ ಕ್ರೀಡಾಕೂಟಗಳು ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಉಲ್ಲಾಸವನ್ನು ನೀಡುತ್ತವೆ. ಎಲ್ಲರೂ ಒಟ್ಟಾಗಿ ಸೇರಿ ಕ್ರೀಡೆಯಲ್ಲಿ ಭಾಗವಹಿಸುವ ಮೂಲಕ ಸ್ನೇಹ ಮತ್ತು ಒಗ್ಗಟ್ಟನ್ನು ಹೆಚ್ಚಿಸಿಕೊಳ್ಳುತ್ತಿರುವುದು ಅತ್ಯಂತ ಸಂತಸದ ವಿಚಾರ" ಎಂದು ಹೇಳಿದರು.

* ರಾಜಶೇಖರ್ ಹಿರೇಮಠ ಅವರ ಮೆಚ್ಚುಗೆ

ರಾಜಶೇಖರ್ ಹಿರೇಮಠ ಸರ್ ಅವರು ಮಾತನಾಡಿ, ಉಪನ್ಯಾಸಕರ ಕ್ರಿಕೆಟ್ ಲೀಗ್‌ನಂತಹ ಕಾರ್ಯಕ್ರಮಗಳು ವೃತ್ತಿಪರ ಒತ್ತಡದ ನಡುವೆ ಉಪನ್ಯಾಸಕರಿಗೆ ಉತ್ತಮ ಮನರಂಜನೆ ಹಾಗೂ ಉತ್ಸಾಹವನ್ನು ನೀಡುತ್ತವೆ ಎಂದು ಹೇಳಿದರು. ಕ್ರೀಡೆಯ ಮೂಲಕ ವಿವಿಧ ಕಾಲೇಜುಗಳ ಉಪನ್ಯಾಸಕರು ಪರಸ್ಪರ ಪರಿಚಯವಾಗುವುದರ ಜೊತೆಗೆ ಉತ್ತಮ ಸ್ನೇಹ ಸಂಬಂಧ ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.ಅಲ್ಲದೆ, ಮುಂದಿನ ದಿನಗಳಲ್ಲಿಯೂ ಇಂತಹ ಕ್ರೀಡಾ ಹಾಗೂ ಸಾಮಾಜಿಕ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು ಎಂದು ಆಶಿಸಿದರು.

* ಕ್ರೀಡಾಸ್ಫೂರ್ತಿಯೊಂದಿಗೆ ಯಶಸ್ವಿ ಸಮಾರೋಪ

ಸಿಂಧನೂರು ಉಪನ್ಯಾಸಕರ ಕ್ರಿಕೆಟ್ ಲೀಗ್ ಸೀಸನ್ 4 ಆರಂಭದಿಂದ ಅಂತ್ಯದವರೆಗೂ ಕ್ರೀಡಾಸ್ಫೂರ್ತಿಯಿಂದ ಸಾಗಿದ್ದು, ವಿವಿಧ ಕಾಲೇಜುಗಳ ಉಪನ್ಯಾಸಕರನ್ನು ಒಂದೇ ವೇದಿಕೆಯಲ್ಲಿ ಸೇರಿಸುವಲ್ಲಿ ಯಶಸ್ವಿಯಾಯಿತು.ಈ ಪಂದ್ಯಾವಳಿಯ ಮೂಲಕ "ಉತ್ತಮ ಆರೋಗ್ಯ, ಸ್ನೇಹ, ಒಗ್ಗಟ್ಟು ಮತ್ತು ಕ್ರೀಡಾಸ್ಫೂರ್ತಿ" ಎಂಬ ಸಂದೇಶವನ್ನು ಸಾರಲಾಯಿತು. ಗೆಲುವು ಸಾಧಿಸಿದ ತಂಡದ ಜೊತೆಗೆ ಪಂದ್ಯಾವಳಿಯಲ್ಲಿ ಭಾಗವಹಿಸಿದ ಎಲ್ಲಾ ತಂಡಗಳಿಗೂ ಅಭಿನಂದನೆ ಸಲ್ಲಿಸಲಾಯಿತು.ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದ ಸಿಂಧನೂರು ಉಪನ್ಯಾಸಕರ ಕ್ರಿಕೆಟ್ ಬಳಗದ ಎಲ್ಲಾ ಪದಾಧಿಕಾರಿಗಳು, ಆಯೋಜಕರು, ವಿವಿಧ ಕಾಲೇಜುಗಳ ಉಪನ್ಯಾಸಕರು, ಆಟಗಾರರು, ಅಂಪೈರ್‌ಗಳು, ಸ್ಕೋರರ್‌ಗಳು ಹಾಗೂ ಕ್ರೀಡಾಭಿಮಾನಿಗಳಿಗೆ ಕೃತಜ್ಞತೆ ಸಲ್ಲಿಸಲಾಯಿತು.ಎಕ್ಸಲೆಂಟ್ ರೈಡರ್ಸ್ ತಂಡದ ಚಾಂಪಿಯನ್

* ಬಹುಮಾನ ವಿತರಣೆ

ಫೈನಲ್ ಪಂದ್ಯದಲ್ಲಿ ಅದ್ಭುತ ಪ್ರದರ್ಶನ ನೀಡಿ ಗೆಲುವು ಸಾಧಿಸಿದ ಎಕ್ಸಲೆಂಟ್ ರೈಡರ್ಸ್ ತಂಡವು ಪ್ರಥ–'ಮ ಬಹುಮಾನ ಪಡೆದುಕೊಂಡಿತು. ರೋಚಕ ಹೋರಾಟ ನೀಡಿದ ಶ್ರೀ ಕನಕದಾಸ ಬಿಗ್ ಬುಲ್ ಕಿಂ–ಗ್ಸ್ ತಂಡವು ದ್ವಿತೀಯ ಬಹುಮಾನ ಪಡೆದುಕೊಂಡಿತು.ವಿಜೇತ ತಂಡಗಳ ಆಟಗಾರರು ಹಾಗೂ ತಂಡದ ಸದಸ್ಯರು ಬಹುಮಾನಗಳನ್ನು ಸ್ವೀಕರಿಸಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಎರಡೂ ತಂಡಗಳ ಆಟಗಾರ–ರಿಗೆ ಹಾಗೂ ಪಂದ್ಯಾವಳಿಯಲ್ಲಿ ಭಾಗವಹಿಸಿದ ಎಲ್ಲಾ ತಂಡಗಳಿಗೆ ಗಣ್ಯರು ಅಭಿನಂದನೆ ಸಲ್ಲಿಸಿದರು.

* ಕ್ರೀಡೆಯ ಜೊತೆಗೆ ಸೇವೆಯ ಸಾರ್ಥಕತೆ: ಅನ್ನದಾನ ಆಯೋಜಿಸಿದ ಇರ್ಫಾನ್ ಕೆ. ಅತ್ತಾರ್

ಫೈನಲ್ ಪಂದ್ಯಕ್ಕೆ ಆಗಮಿಸಿದ ಗಣ್ಯರು, ಉಪನ್ಯಾಸಕರು, ಆಟಗಾರರು ಹಾಗೂ ಕ್ರೀಡಾಭಿಮಾನಿಗಳಿಗಾಗಿ ವಿಶೇಷ ಊಟದ ವ್ಯವಸ್ಥೆಯನ್ನು ಸನ್ ರೈಸ್ D.Pharmacy, Nursing & Paramedical College ನ ಅಧ್ಯಕ್ಷರಾದ ಶ್ರೀ ಇರ್ಫಾನ್ ಕೆ. ಅತ್ತಾರ್ ಅವರ ವತಿಯಿಂದ ಏರ್ಪಡಿಸಲಾಗಿತ್ತು.ಈ ಸಂದರ್ಭದಲ್ಲಿ "ಅನ್ನಂ ಪರಬ್ರಹ್ಮ ಸ್ವರೂಪಿಣೆ, ಅನ್ನದಾತೋ ಸುಖೀ ಭವ" ಎಂಬ ಆಶಯದೊಂದಿಗೆ ಅನ್ನದಾನದ ಮಹತ್ವವನ್ನು ಸಾರಲಾಯಿತು. ಅನ್ನದಾನ ಮಾಡಿದ ಶ್ರೀ ಇರ್ಫಾನ್ ಕೆ. ಅತ್ತಾರ್ ಅವರಿಗೆ ಎಲ್ಲರೂ ಕೃತಜ್ಞತೆ ಸಲ್ಲಿಸಿ, ಅವರ ಸೇವಾ ಮನೋಭಾವವನ್ನು ಶ್ಲಾಘಿ–ಸಿದರು.ಕಾರ್ಯಕ್ರಮಕ್ಕೆ ಆಗಮಿಸಿದ ಎಲ್ಲರಿಗೂ ಆತ್ಮೀಯವಾಗಿ ಊಟ ಬಡಿಸುವ ಮೂಲಕ ಸೌಹಾರ್ದತೆ, ಸಹೋದರತ್ವ, ಸೇವಾ ಮನೋಭಾವ ಹಾಗೂ ಒಗ್ಗಟ್ಟಿನ ಸಂದೇಶವನ್ನು ಸಾರಲಾಯಿತು. ಕ್ರೀಡಾಕೂಟದ ಜೊತೆಗೆ ಇಂತಹ ಆತಿಥ್ಯ ಹಾಗೂ ಅನ್ನದಾನ ಕಾರ್ಯಕ್ರಮವು ಸಮಾರಂಭಕ್ಕೆ ಮತ್ತಷ್ಟು ಮೆರುಗು ನೀಡಿತು."ಅನ್ನದಾತೋ ಸುಖೀ ಭವ"ಅನ್ನದಾನ ಮಾಡಿದ ಶ್ರೀ ಇರ್ಫಾನ್ ಕೆ. ಅತ್ತಾರ್ ಅವರಿಗೆ ಸದಾ ಸುಖ, ಸಮೃದ್ಧಿ ಮತ್ತು ಯಶಸ್ಸು ದೊರೆಯಲಿ ಎಂದು ಹಾರೈಸಲಾಯಿತು.

ಸಚಿವ ಸತೀಶ್ ಜಾರಕಿಹೊಳಿ ವಿರುದ್ಧದ ರಾಜಕೀಯ ಷಡ್ಯಂತ್ರವನ್ನು ಮಟ್ಟ ಹಾಕಲು ಒಗ್ಗಟ್ಟಾಗಿ: ಕೆ ಪಿ ಸಿ ಸಿ ರಾಜ್ಯ ಸಂಯೋಜಕರಾದ ವೇಣುಗೋಪಾಲಗೌಡ ಕರೆ


❑ ನೈಜ್ಯ ದೇಸೆ ನ್ಯೂಸ್



ಜಾಲಹಳ್ಳಿ.: ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ವಿರುದ್ಧ ನಡೆಯುತ್ತಿರುವ ಬೆಳವಣಿಗೆಗಳು ರಾಜಕೀಯ ಪ್ರೇರಿತವಾಗಿದ್ದು, ಇಂತಹ ಷಡ್ಯಂತ್ರಗಳನ್ನು ಎದುರಿಸಲು ವಾಲ್ಮೀಕಿ ಹಾಗೂ ಅಹಿಂದ ಸಮುದಾಯಗಳ ಮುಖಂಡರು ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಸಚಿವರ ಪರವಾಗಿ ಧ್ವನಿ ಎತ್ತಬೇಕು ಎಂದು ಕೆಪಿಸಿಸಿ ರಾಜ್ಯ ಸಂಯೋಜಕ ಹಾಗೂ ವಕೀಲರಾದ ವೇಣುಗೋಪಾಲಗೌಡ ಅವರು ಕರೆ ನೀಡಿದರು.ಈ ಕುರಿತು ಮಾತನಾಡಿದ ಅವರು, "ದ್ರೋಹದ ಪ್ರಶ್ನೆಯೇ ಇಲ್ಲ. ಬೇಡರ ರಕ್ತದಲ್ಲಿ ನಂಬಿದವರಿಗೆ ರಕ್ಷಣೆ ಮಾಡುವ ಗುಣವಿದೆ; ದ್ರೋಹ ಮಾಡುವ ಪ್ರಶ್ನೆಯೇ ಇಲ್ಲ" ಎಂದು ಹೇಳಿದರು.ಸಚಿವ ಸತೀಶ್ ಜಾರಕಿಹೊಳಿ ಅವರ ವಿರುದ್ಧ ನಡೆಯುತ್ತಿರುವ ಪ್ರಸ್ತುತ ಬೆಳವಣಿಗೆಗಳು ಹಾಗೂ ತನಿಖೆಗಳ ಹಿಂದೆ ರಾಜಕೀಯ ಪ್ರೇರಿತ ಷಡ್ಯಂತ್ರವಿದೆ ಎಂದು ಆರೋಪಿಸಿದ ವಕೀಲರಾದ ವೇಣುಗೋಪಾಲಗೌಡ ರಾಜ್ಯ ಸಂಯೋಜಕ ಕೆ ಪಿ ಸಿ ಸಿ ಬೆಂಗಳೂರು ಅವರು, ವಾಲ್ಮೀಕಿ ಮತ್ತು ಅಹಿಂದ ಸಮುದಾಯಗಳ ಮುಖಂಡರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಸಚಿವರ ಬೆಂಬಲಕ್ಕೆ ನಿಂತು, ರಾಜಕೀಯ ಷಡ್ಯಂತ್ರಗಳ ವಿರುದ್ಧ ಒಗ್ಗಟ್ಟನ್ನು ಪ್ರದರ್ಶಿಸಬೇಕು ಎಂದು ಮನವಿ ಮಾಡಿದರು.ಸಚಿವರ ಪರವಾಗಿ ಜನರು ಮತ್ತು ಪಕ್ಷದ ಕಾರ್ಯಕರ್ತರು ಸಂಘಟಿತರಾಗಿ ನಿಲ್ಲುವ ಮೂಲಕ ಸತ್ಯಕ್ಕೆ ಬೆಂಬಲ ನೀಡಬೇಕು ಎಂದು ಅವರು ಅಭಿಪ್ರಾಯಪಟ್ಟರು.ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

ಗಣೇಶ ಹಬ್ಬದ ಪ್ರಯುಕ್ತ ಮಲ್ಲದಗುಡ್ಡದಲ್ಲಿ ಶಾಂತಿ ಸಭೆ

❑ ನೈಜ್ಯ ದೇಸೆ ನ್ಯೂಸ್



ಮಲ್ಲದಗುಡ್ಡ: ಮುಂಬರುವ ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಕವಿತಾಳ ಪೊಲೀಸ್ ಠಾಣೆ ವ್ಯಾಪ್ತಿಯ ಮಲ್ಲದಗುಡ್ಡ ಗ್ರಾಮದಲ್ಲಿ ಸಾರ್ವಜನಿಕರೊಂದಿಗೆ ಶಾಂತಿ ಸಭೆ ನಡೆಸಲಾಯಿತು.ಸಭೆಯಲ್ಲಿ ಕವಿತಾಳ ಪೊಲೀಸ್ ಠಾಣೆಯ ಪಿ.ಎಸ್.ಐ. ಅವರು ಗಣೇಶ ಮೂರ್ತಿ ಪ್ರತಿಷ್ಠಾಪನೆ ಹಾಗೂ ವಿಸರ್ಜನೆ ಸಂದರ್ಭದಲ್ಲಿ ಸಾರ್ವಜನಿಕರು ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವಂತೆ ಸಲಹೆ ನೀಡಿದರು. ಹಬ್ಬವನ್ನು ಶಾಂತಿ, ಸೌಹಾರ್ದತೆ ಹಾಗೂ ಸಂಭ್ರಮದಿಂದ ಆಚರಿಸುವಂತೆ ಸೂಚಿಸಿದರು. ಗಣೇಶೋತ್ಸವದ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ, ಪೊಲೀಸ್ ಇಲಾಖೆಯ ಮಾರ್ಗಸೂಚಿಗಳು ಹಾಗೂ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸಾರ್ವಜನಿಕರಿಗೆ ತಿಳಿಸಲಾಯಿತು. ಧ್ವನಿವರ್ಧಕ ಬಳಕೆ, ಮೆರವಣಿಗೆ, ಗಣೇಶ ಮೂರ್ತಿ ವಿಸರ್ಜನೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಅಗತ್ಯ ಸಲಹೆ–ಸೂಚನೆಗಳನ್ನು ನೀಡಲಾಯಿತು.ಗ್ರಾಮದಲ್ಲಿ ಶಾಂತಿ ಮತ್ತು ಸೌಹಾರ್ದತೆ ಕಾಪಾಡುವ ನಿಟ್ಟಿನಲ್ಲಿ ಸಾರ್ವಜನಿಕರು ಪೊಲೀಸ್ ಇಲಾಖೆಯೊಂದಿಗೆ ಸಹಕರಿಸುವಂತೆ ಪಿ.ಎಸ್.ಐ. ಅವರು ಮನವಿ ಮಾಡಿದರು. ಸಭೆಯಲ್ಲಿ ಗ್ರಾಮಸ್ಥರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಸಾಂಸ್ಕೃತಿಕ ಮೌಲ್ಯಗಳನ್ನು ಮರೆಯಬಾರದು: ಅಡಿವೆಮ್ಮ

❑ ನೈಜ್ಯ ದೇಸೆ ನ್ಯೂಸ್



ಸಿಂಧನೂರು : ಆಧುನಿಕತೆಯ ಈ ದಿನಗಳಲ್ಲಿ ವಿದ್ಯಾರ್ಥಿನಿಯರು ನಮ್ಮ ಸಾಂಸ್ಕೃತಿಕ ಮೌಲ್ಯಗಳನ್ನು ಯಾವುದೇ ಕಾರಣಕ್ಕೂ ಮರೆಯಬಾರದು, .ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರವನ್ನು ಮೈಗೂಡಿಸಿಕೊಂಡಾಗ ಮಾತ್ರ ವಿದ್ಯಾರ್ಥಿನಿಯರ ಜೀವನ ಸಾರ್ಥಕವಾಗುತ್ತದೆ. ತಮಗೆ ಜನ್ಮ ನೀಡಿದ ಹೆತ್ತವರಿಗೆ ಹಾಗೂ ಅಕ್ಷರ ಕಲಿಸಿದ ಗುರುಗಳಿಗೆ ಸದಾ ಗೌರವ ತರುವಂತೆ ಬದುಕಬೇಕು ಎಂದು ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ನಿವೃತ್ತ ಮುಖ್ಯ ಶಿಕ್ಷಕಿ ಅಡಿವೆಮ್ಮ ಅವರು ಕರೆ ನೀಡಿದರು ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಇಂದು ಚುಟುಕು ಸಾಹಿತ್ಯ ಪರಿಷತ್ ಹಮ್ಮಿಕೊಂಡಿದ್ದ ಪ್ರಸಿದ್ಧ ಸಾಹಿತಿ, 'ಚುಟುಕು ಬ್ರಹ್ಮ' ದಿನಕರ ದೇಸಾಯಿ ಅವರ 117ನೇ ಜನ್ಮ ದಿನಾಚರಣೆ ಹಾಗೂ 'ಚುಟುಕು ಚಂದನ' ಕಾರ್ಯಕ್ರಮದಲ್ಲಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡುತ್ತಿದ್ದರು.ಕಾರ್ಯಕ್ರಮದ ಆರಂಭದಲ್ಲಿ ಸಿಂಧನೂರು ತಾಲೂಕು ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಎಂ. ಭಾಸ್ಕರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಪರಿಷತ್ತಿನ ವಿಭಿನ್ನ ಕಾರ್ಯಚಟುವಟಿ–ಕೆಗಳ ಬಗ್ಗೆ ಮಾಹಿತಿ ನೀಡಿ, ತಮ್ಮ ಸ್ವರಚಿತ ಚುಟುಕುಗಳನ್ನು ವಾಚಿಸಿದರು. ಕಾರ್ಯಕ್ರಮದಲ್ಲಿ ದಿನಕರ ದೇಸಾಯಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿದ ಪತ್ರಕರ್ತ ಡಿ.ಎಚ್. ಕಂಬಳಿ ಅವರು, ಕನ್ನಡ ಸಾಹಿತ್ಯದಲ್ಲಿ ಚುಟುಕುಗಳು ಹೆಚ್ಚು ಗಮನ ಸೆಳೆಯುತ್ತವೆ. ಶರಣರ ವಚನಗಳು, ಸರ್ವಜ್ಞನ ವಚನಗಳು, ಜಾನಪದ ತ್ರಿಪದಿಗಳು ಹಾಗೂ ಚೌಪದಿಗಳು ಚುಟುಕು ರೂಪದಲ್ಲಿದ್ದು ಸಮಾಜಕ್ಕೆ ದೊಡ್ಡ ಸಂದೇಶವನ್ನು ನೀಡುತ್ತವೆ ಎಂದು ಅಭಿಪ್ರಾಯಪಟ್ಟರು. ಇದೇ ವೇಳೆ ರಾಯಚೂರು ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಗೌರವಾಧ್ಯಕ್ಷರು ಹಾಗೂ ಹಿರಿಯ ಸಾಹಿತಿಗಳಾದ ಬೀರಪ್ಪ ಶಂಭೋಜಿ ಅವರು ಭಾಗವಹಿಸಿ, ದಿನಕರ ದೇಸಾಯಿ, ರಾಜ್ಯ ಸಂಚಾಲಕರಾದ ಡಾ. ಎಂ.ಜಿ.ಆರ್. ಅರಸು ಅವರ ಕು–ರಿತು ತಮ್ಮ ಸ್ವರಚಿತ ಚುಟುಕುಗಳನ್ನು ವಾಚನ ಮಾಡಿ ಗಮನ ಸೆಳೆದರು. ಲಿಂಗಸಗೂರು ತಾಲೂಕು ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ದುರ್ಗಾಸಿಂಗ್ ಅವರು ವಿಶೇಷ ಉಪನ್ಯಾಸ ನೀಡಿ, ದಿನಕರ ದೇಸಾಯಿ ಅವರ ಬದುಕು ಮತ್ತು ಬರಹಗಳ ಕು–ರಿತು ಬೆಳಕು ಚೆಲ್ಲಿದರು. ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥರಾದ ಮಹಂತಪ್ಪ ಕೊಡಗಲಿ ಅವರು, ಜಗದ್ಗುರು ಬಸವಣ್ಣನವರ 'ಉಳ್ಳವರು ಶಿವಾಲಯ ಮಾಡುವರು ನಾನೇನು ಮಾಡಲಿ ಬಡವನಯ್ಯಾ' ಎಂಬ ಪ್ರಸಿದ್ಧ ವಚನವನ್ನು ಅತ್ಯಂತ ಮಧುರವಾಗಿ ಹಾಡಿದರು.ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಚಾರ್ಯ ಹಾಗೂ ರಂಗಭೂಮಿಯ ಕಲಾವಿದ ಕೃಷ್ಣಪ್ಪ ನಾಯಕ ಸಾಹಿತ್ಯ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ವಿದ್ಯಾರ್ಥಿನಿಯರಲ್ಲಿರುವ ಪ್ರತಿಭೆಯನ್ನು ಹೊರಹಾಕಲು ಉಪಯುಕ್ತ ಎಂದರು ಕಾರ್ಯಕ್ರಮದ ಅಂಗವಾಗಿ ನಡೆದ ಕವಿಗೋಷ್ಠಿಯಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕೋಶಾಧ್ಯಕ್ಷೆ ಹಾಗೂ ಕವಯಿತ್ರಿ ಶಾಂತಾ ಮಹೇಶ, ಮೊಹಮ್ಮದ್ ಶೇಖ್ ಶಾಜಿ, ಹಾಗೂ ಉಪನ್ಯಾಸಕಿ ಮಹೇಶ್ವರಿ, ಅವರು ತಮ್ಮ ಚುಟುಕುಗಳನ್ನು ವಾಚನ ಮಾಡಿದರು. ವೇದಿಕೆಯ ಮೇಲೆ ಸಿಂಧನೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಎಚ್.ಎಫ್. ಮಸ್ಕಿ, ಡಾ. ಮಗದಪ್ಪ ಹಾಗೂ ಗೋಪಿ ಅವರು ಉಪಸ್ಥಿತ–ರಿದ್ದರು. ಕಾರ್ಯ ಕ್ರಮದಲ್ಲಿ ಚುಟುಕು ಸಾಹಿತ್ಯ ಪರಿಷತ್ತಿನ ಪದಾಧಿಕಾ–ರಿಗಳು, ಕಾಲೇಜಿನ ಉಪನ್ಯಾಸಕರು ಹಾಗೂ ನೂರಾರು ವಿದ್ಯಾರ್ಥಿನಿಯರು ಭಾಗವಹಿಸಿದ್ದರು.ಕಾರ್ಯಕ್ರಮದಲ್ಲಿ ಉಪನ್ಯಾಸಕ ಚಾಂದ್‌ಪಾಷಾ ಸ್ವಾಗತಿಸಿದರು. ಆಂಗ್ಲ ಭಾಷಾ ಸಹಾಯಕ ಪ್ರಾಧ್ಯಾಪಕ ಮುದುಕಪ್ಪ ಕಾರ್ಯಕ್ರಮ ನಿರೂಪಿಸಿದರು. ಉಪನ್ಯಾಸಕ ಯರಿಯಪ್ಪ ಕೊನೆಯಲ್ಲಿ ವಂದನಾರ್ಪಣೆ ಮಾಡಿದರು.ನಿವೃತ್ತ ಪ್ರೌಢಶಾಲಾ ಮುಖ್ಯ ಶಿಕ್ಷಕಿ ಅಡಿವೆಮ್ಮರನ್ನು ಗೌರವಿಸಲಾಯಿತು.

ಸಾಹಿತ್ಯ ಸಿಂಚನ

ನಮ್ಮ ಪರಿಸರ ನಮ್ಮ ಉಸಿರು

ಮರಗಳ ನೆರಳಲಿ ಬದುಕು ಅರಳಿತು,
ಹಸಿರಿನ ಮಡಿಲಲಿ ನಾಡು ನಗಿತು,
ಹಕ್ಕಿಗಳ ಕಲರವ ಬೆಳಗನ್ನು ತಂದಿತು,
ನಿಸರ್ಗದ ಮಡಿಲು ಮನವನು ಗೆದ್ದಿತು.

ಓ ಮನುಜನೇ, ನೆನಪಿರಲಿ ಒಂದು ಮಾತು,
ಪರಿಸರ ಉಳಿದರೆ ಉಳಿಯುವುದು ನಿನ್ನ ಉಸಿರು;
ನಿಸರ್ಗ ನಾಶವಾದರೆ ನಾಶವಾಗುವುದು ಬದುಕು,
ಹಸಿರು ಉಳಿಸುವುದೇ ನಮ್ಮೆಲ್ಲರ ಹೊಣೆ!

ಮರವೆಂದರೆ ಕೇವಲ ಮರವಲ್ಲ,
ಅದು ಉಸಿರಿನ ಅಮೂಲ್ಯ ನಿಧಿ,
ಬಿಸಿಲಿಗೆ ತಂಪಿನ ನೆರಳದು,
ಹಕ್ಕಿಗಳಿಗೆ ಮನೆಯ ಮಡಿ.

ಒಂದು ಬೀಜ ನೆಲದಲ್ಲಿ ಬಿತ್ತಿದರೆ,
ನಾಳೆ ಅದು ಮರವಾಗಿ ನಿಂತೀತು,
ಒಂದು ಮರವನ್ನು ಬೆಳೆಸಿದರೆ,
ಸಾವಿರ ಜೀವಗಳಿಗೆ ಉಸಿರಾಗೀತು.

ಕಾಡುಗಳೆಲ್ಲ ಕಡಿದು ಹೋದರೆ,
ಮೋಡಗಳಿಗೂ ದಾರಿ ತಪ್ಪುವುದು,
ಮಳೆ ಬರುವ ಕಾಲ ಮರೆತು,
ಬರದ ನೆರಳು ನಾಡನು ಆವರಿಸುವುದು.

ನದಿಯ ನೀರು ಅಮೃತದಂತೆ,
ಜೀವಜಗತ್ತಿನ ಜೀವನಾಡಿ,
ಅದನ್ನು ಕಲುಷಿತಗೊಳಿಸಿದರೆ,
ನಮ್ಮ ಬದುಕಿಗೇ ಬರುವುದು ಆಪತ್ತು.

ನದಿ ಹರಿಯಲಿ ನಿರ್ಮಲವಾಗಿ,
ಕೆರೆ ತುಂಬಲಿ ಮಳೆಯ ನೀರಿನಿಂದ,
ಬಾವಿ ಉಳಿಯಲಿ ಮುಂದಿನ ಪೀಳಿಗೆಗೆ,
ಭೂಮಿ ನಗಲಿ ಹಸಿರಿನ ಚಿಗುರಿನಿಂದ.

ಪ್ಲಾಸ್ಟಿಕ್ ಎಂಬ ವಿಷದ ಹೊದಿಕೆ,
ಭೂಮಿಯ ಎದೆಯ ಮೇಲೆ ಬೀಳದಿರಲಿ,
ಕಸವನ್ನು ಎಲ್ಲೆಂದರಲ್ಲಿ ಎಸೆಯದೆ,
ಸ್ವಚ್ಛತೆಯ ದೀಪ ಪ್ರತಿಮನೆಯಲಿ ಬೆಳಗಲಿ.

ಹೊಗೆ ತುಂಬಿದ ನಗರ ಬೇಡ,
ಹಸಿರು ತುಂಬಿದ ನಗರ ಬೇಕು,
ವಾಹನಗಳ ಹೊಗೆಯ ಬದಲು,
ಮರಗಳ ತಂಪಾದ ಗಾಳಿ ಬೇಕು.

ಚಿಟ್ಟೆ ಹಾರಲಿ ಹೂವಿನ ಮೇಲೆ,
ಜೇನುಹುಳು ಗುನುಗಲಿ ತೋಟದಲಿ,
ನವಿಲು ಕುಣಿಯಲಿ ಮಳೆಯಲಿ,
ಜಿಂಕೆ ಓಡಲಿ ಕಾಡಿನಲಿ.

ಹಕ್ಕಿಗಳ ಗೂಡು ಉಳಿಸೋಣ,
ಪ್ರಾಣಿಗಳ ಕಾಡು ಉಳಿಸೋಣ,
ಜೀವ ವೈವಿಧ್ಯದ ಸೊಬಗನ್ನು,
ಮುಂದಿನ ಪೀಳಿಗೆಗೆ ನೀಡೋಣ.

ಮಣ್ಣಿನ ಕಣದಲ್ಲಿದೆ ಜೀವ,
ರೈತನ ಬೆವರಲ್ಲಿದೆ ಅನ್ನ,
ಮಣ್ಣನ್ನು ವಿಷಗೊಳಿಸದೆ ಕಾಪಾಡೋಣ,
ಅದೇ ನಮ್ಮ ಬದುಕಿನ ಧನ.

ನೀರು ಉಳಿಸೋಣ ಹನಿಹನಿಯಾಗಿ,
ಮಳೆನೀರನ್ನು ಸಂಗ್ರಹಿಸೋಣ,
ಇಂದು ಉಳಿಸಿದ ಒಂದು ಹನಿ,
ನಾಳೆಯ ಜೀವಕ್ಕೆ ಆಧಾರವಾಗಿಸೋಣ.

ಭೂಮಿ ನಮ್ಮ ತಾಯಿ ಎಂದರೆ,
ಅವಳನ್ನು ನೋಯಿಸುವ ಹಕ್ಕು ಯಾರಿಗೆ?
ಅವಳ ಮಡಿಲಲ್ಲಿ ಹುಟ್ಟಿ ಬೆಳೆದ ನಾವು,
ಅವಳನ್ನು ರಕ್ಷಿಸುವ ಕರ್ತವ್ಯ ನಮಗೆ.

ಮಕ್ಕಳ ಕೈಗೆ ಸಸಿ ನೀಡೋಣ,
ಅವರ ಮನದಲ್ಲಿ ಹಸಿರು ಬಿತ್ತೋಣ,
“ಒಬ್ಬ ಮಗು ಒಂದು ಗಿಡ” ಎಂದು,
ಹೊಸ ಸಂಪ್ರದಾಯವೊಂದನು ಕಟ್ಟೋಣ.

ಮನೆಯ ಮುಂದೆ ಒಂದು ಮರ,
ಶಾಲೆಯ ಮುಂದೆ ಹಸಿರು ಸಾಲು,
ರಸ್ತೆಯ ಬದಿಯಲ್ಲಿ ನೆರಳಿನ ಮರ,
ನಾಡಿನ ತುಂಬ ಹಸಿರಿನ ಮಾಲೆ.

ಇಂದು ನಾವು ಬದಲಾದರೆ,
ನಾಳೆ ಪ್ರಕೃತಿ ನಗುವುದು,
ಇಂದು ನಾವು ಮರ ನೆಟ್ಟರೆ,
ನಾಳೆ ಪೀಳಿಗೆ ನೆರಳಲ್ಲಿ ಬದುಕುವುದು.

ಪ್ರಕೃತಿ ನಮ್ಮ ಆಸ್ತಿ ಅಲ್ಲ,
ನಾವು ಪ್ರಕೃತಿಯ ಒಂದು ಭಾಗ,
ಅವಳನ್ನು ಕಾಪಾಡುವುದು ನಮ್ಮ ಧರ್ಮ,
ಅವಳೊಂದಿಗೆ ಬದುಕುವುದೇ ನಿಜವಾದ ಭಾಗ್ಯ.

ಬನ್ನಿ ಎಲ್ಲರೂ ಕೈಜೋಡಿಸೋಣ,
ಹಸಿರಿನ ಕ್ರಾಂತಿ ಆರಂಭಿಸೋಣ,
ಮರ ಬೆಳೆಸಿ, ನೀರು ಉಳಿಸಿ,
ಸ್ವಚ್ಛ ಭೂಮಿಯ ಕನಸು ನನಸಾಗಿಸೋಣ.

ಕ್ರಾಂತಿಯ ಜ್ಯೋತಿ – ಪ್ರವಾದಿ ಮುಹಮ್ಮದ್ ವಿಚಾರಗೋಷ್ಠಿ ಯಶಸ್ವಿ

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು:ಸಿಂಧನೂರು ನಗರದ ಮಿಲಾಪ್ ಶಾದಿ ಮಹಲ್‌ನಲ್ಲಿ ಜಮಾಅತೆ ಇಸ್ಲಾಮಿ ಹಿಂದ್, ಸಿಂಧನೂರು ವತಿಯಿಂದ “ಕ್ರಾಂತಿಯ ಜ್ಯೋತಿ ಪ್ರವಾದಿ ಮುಹಮ್ಮದ್ ” ಎಂಬ ವಿಷಯದಡಿ ಆಯೋಜಿಸಲಾಗಿದ್ದ ವಿಚಾರಗೋಷ್ಠಿ ಅತ್ಯಂತ ಯಶಸ್ವಿಯಾಗಿ ನಡೆಯಿತು. ಕಾರ್ಯಕ್ರಮದಲ್ಲಿ ಪುರುಷರು ಮತ್ತು ಮಹಿಳೆಯರು ಸೇರಿದಂತೆ ಸುಮಾರು 2,000 ಜನರು ಭಾಗವಹಿಸಿದ್ದರು. ಕಾರ್ಯಕ್ರಮವು ಮೌಲಾನಾ ಮೆಹರಾಜ್ ಅಹ್ಮದ್ ಖಾದ್ರಿ ಅವರ ಪವಿತ್ರ ಕುರಾನ್ ಪಠಣ ಹಾಗೂ ಕನ್ನಡ ಅನುವಾದದೊಂದಿಗೆ ಆರಂಭವಾಯಿತು. ನಂತರ ಶ್ರೀ ಪಂಪಯ್ಯ ಸಾಲಿಮಠ ಅವರು ಕನ್ನಡ ಕಬೀರ ಇಬ್ರಾಹಿಂ ಸುತಾರ್ ಅವರ ಕವನ–ವಚನವನ್ನು ಪ್ರಸ್ತುತಪಡಿಸಿದರು.ಕಾರ್ಯಕ್ರಮದ ನಿರೂಪಣೆಯನ್ನು ಜನಾಬ್ ಹುಸೇನ್ ಭಾಷಾ ಶಿಕ್ಷಕರು ಅಚ್ಚುಕಟ್ಟಾಗಿ ನಡೆಸಿಕೊಟ್ಟರು.ಸ್ಥಳೀಯ ಜಮಾಅತ್ ಅಧ್ಯಕ್ಷರಾದ ಜನಾಬ್ ಮೊಹಮ್ಮದ್ ಹುಸೇನ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಕಳೆದ ಎಂಟು ದಶಕಗಳಿಂದ ಜಮಾಅತೆ ಇಸ್ಲಾಮಿ ಹಿಂದ್ ದೇಶದಾದ್ಯಂತ ಇರುವ ತಪ್ಪು ಕಲ್ಪನೆಗಳನ್ನು ದೂರಗೊಳಿಸಿ, ಸೌಹಾರ್ದತೆಯ ವಾತಾವರಣ ನಿರ್ಮಿಸುವ ಉದ್ದೇಶದಿಂದ ವಿವಿಧ ರಚನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದರು. ಪ್ರವಾದಿ ಮುಹಮ್ಮದ್ ಅವರ ಜನ್ಮಮಾಸದ ಅಂಗವಾಗಿ ಸಿಂಧನೂರಿನ ಪೌರಕಾರ್ಮಿಕರನ್ನು ಆಹ್ವಾನಿಸಿ ಗೌರವಿಸುವ ಕಾರ್ಯಕ್ರಮವನ್ನೂ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.ಪ್ರವಾದಿ ಪ್ರೇಮದ ಹೆಸ–ರಿನಲ್ಲಿ ನಡೆಯುವ ಕರ್ಕಶ ಡಿಜೆ, ಸಾರ್ವಜನಿಕರಿಗೆ ತೊಂದರೆ ಉಂಟುಮಾಡುವ ಮೆರವಣಿಗೆಗಳು ಹಾಗೂ ಶಾಂತಿ–ಸೌಹಾರ್ದತೆಗೆ ಧಕ್ಕೆ ತರುವ ಯಾವುದೇ ಚಟುವಟಿಕೆಗಳನ್ನು ಸಮುದಾಯವು ಖಂಡಿಸುತ್ತದೆ. ಸಮಾಜದಲ್ಲಿ ಶಾಂತಿಯುತ ಮತ್ತು ಸೌಹಾರ್ದಯುತ ವಾತಾವರಣ ನಿರ್ಮಿಸಲು ಎಲ್ಲರೂ ಶ್ರಮಿಸಬೇಕು ಎಂದು ಅವರು ಕರೆ ನೀಡಿದರು.ಎರಡು ಕೃತಿಗಳ ಲೋಕಾರ್ಪಣೆ ಸೀರತ್ ಅಭಿಯಾನದ ಅಂಗವಾಗಿ ರಚಿಸಲಾದ ಶ್ರೀ ಯೋಗೇಶ್ ಮಾಸ್ಟರ್ ಅವರ “ಮನದೊಡೆಯ ಮೊಹಮ್ಮದ್” ಹಾಗೂ ಅಬ್ದುಸ್ಸಲಾಂ ಪುತ್ತಿಗೆ ಅವರ “ಸಮಗ್ರ ಕ್ರಾಂತಿಯ ಜ್ಯೋತಿ ಬೆಳಗಿದ ಪೈಗಂಬರ್ ಮೊಹಮ್ಮದ್” ಎಂಬ ಎರಡು ಕೃತಿಗಳನ್ನು ವೇದಿಕೆಯಲ್ಲಿ ಉಪಸ್ಥಿತರಿದ್ದ ಗಣ್ಯರು ಲೋಕಾರ್ಪಣೆಗೊಳಿಸಿದರು.ಕಾರ್ಯಕ್ರಮದ

ಅತಿಥಿ ಭಾಷಣಕಾರರಾದ ಮಾನ್ಯ ಶ್ರೀ ರಾಜೇಶ್ ಹಿರೇಮಠ, ಉದ್ಯಮಿಗಳು ಹಾಗೂ ಬಿಜೆಪಿ ಮುಖಂಡರು ಮಾತನಾಡಿ, ಸಿಂಧನೂರು ನಗರವು ಭಾವೈಕ್ಯತೆಗೆ ಹೆಸರುವಾಸಿಯಾಗಿದ್ದು,









ಇಂದಿನ ಕಾರ್ಯಕ್ರಮವೂ ಅದಕ್ಕೆ ಸಾಕ್ಷಿಯಾಗಿದೆ ಎಂದರು. ಎಲ್ಲರೂ ಮನುಷ್ಯತ್ವದಿಂದ ನಡೆದುಕೊಳ್ಳಬೇಕು. ಇಸ್ಲಾಂ ಕೂಡ ಶ್ರೇಷ್ಠವಾದ ಧರ್ಮವಾಗಿರುವುದರಿಂದ ಅದು ವಿಶ್ವದಾದ್ಯಂತ ವ್ಯಾಪಿಸಿದೆ ಎಂದು ಹೇಳಿದರು.ಮುಖ್ಯ ಅತಿಥಿ–ಯಾಗಿ ಆಗಮಿಸಿದ್ದ ಮಾಜಿ ಸಚಿವರಾದ ಮಾನ್ಯ ಶ್ರೀ ವೆಂಕಟರಾವ್ ನಾಡಗೌಡ ಅವರು ಮಾತನಾಡಿ, ಇಂದಿನ ಯುವಕರು ಕೆಡುಕುಗಳ ಕಡೆಗೆ ಹೆಚ್ಚು ವಾಲುತ್ತಿರುವ ಸಂದರ್ಭದಲ್ಲಿ ಹಿರಿಯರಾದ ನಾವು ಯುವಜನತೆಗೆ ಉತ್ತಮ ಸಂಸ್ಕಾರ ಮತ್ತು ಮೌಲ್ಯಗಳನ್ನು ಪರಿಚಯಿಸುವ ಅಗತ್ಯವಿದೆ. ಈ ಕಾರ್ಯಕ್ರಮದ ಉದ್ದೇಶವೂ ಇದೇ ಆಗಿದೆ ಎಂದು ಹೇಳಿದರು.ಸಭೆಯ ಸಾನಿಧ್ಯ ವಹಿಸಿದ್ದ ಪೂಜ್ಯ ಶ್ರೀ ಮ.ನಿ.ಪ್ರ. ಡಾ. ಸಿದ್ದಲಿಂಗ ಮಹಾಸ್ವಾಮಿಗಳು, ಸುವರ್ಣಗಿರಿ ವಿರಕ್ತ ಮಠ, ಒಳಬಳ್ಳಾರಿ ಅವರು ಮಾತನಾಡಿ, ಮನುಷ್ಯನನ್ನು ಮಹಾಮಾನವನನ್ನಾಗಿ ರೂಪಿಸುವಂತಹ ಕಾರ್ಯಕ್ರಮಗಳು ಶ್ಲಾಘನೀಯವಾಗಿವೆ. ನಾವೆಲ್ಲರೂ ಪರಸ್ಪರ ಸಹೋದರರಂತೆ ಬದುಕುವಂತಹ ಸದ್ಬುದ್ಧಿಯನ್ನು ದೇವರು ಕರುಣಿಸಲಿ ಎಂದು ಹಾರೈಸಿದರು.ಅತಿಥಿಯಾಗಿ ಆಗಮಿಸಿದ್ದ ಶ್ರೀಮತಿ ಶೋಭಾ ತೋರಗಲ್, ಅಧ್ಯಕ್ಷರು, ದಲಿತ ಸಾಹಿತ್ಯ ಪರಿಷತ್ ಮಹಿಳಾ ವಿಭಾಗ, ಸಿಂಧನೂರು ಅವರು ಮಾತನಾಡಿ, ಎಲ್ಲಾ ಧರ್ಮಗಳ ಸಾರವೂ ಮನುಷ್ಯನನ್ನು ಒಳಿತಿನ ಕಡೆಗೆ ಕರೆದೊಯ್ಯುವುದಾಗಿದೆ. ಇಂದಿನ ಯುವಜನತೆಯಲ್ಲಿ ಮೌಲ್ಯಗಳ ಕೊರತೆ ಕಂಡುಬರುತ್ತಿದ್ದು, ಪ್ರೀತಿ, ಕರುಣೆ ಮತ್ತು ಮಾನವೀಯತೆಯಂತಹ ಮೌಲ್ಯಗಳನ್ನು ಪ್ರವಾದಿಗಳು ಸಮಾಜದಲ್ಲಿ ಸ್ಥಾಪಿಸಿದರು ಎಂದು ಹೇಳಿದರು.ಪ್ರವಾದಿ ಅವರ ಜೀವನ ಮಾನವೀಯತೆಯ ಮಾದರಿಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜನಾಬ್ ಮೊಹಮ್ಮದ್ ಕುನ್ನಿ, ರಾಜ್ಯ ಕಾರ್ಯದರ್ಶಿಗಳು, ಜಮಾಅತೆ ಇಸ್ಲಾಮಿ ಹಿಂದ್ ಕರ್ನಾಟಕ ಅವರು ಮಾತನಾಡಿ, ಧರ್ಮವನ್ನು ಅಧರ್ಮಿಗಳು ಧರ್ಮದ ರಕ್ಷಣೆಯ ಹೆಸರಿನಲ್ಲಿ ಪ್ರತಿನಿಧಿಸುವಂತಹ ದುರಂತ ಕಾಲದಲ್ಲಿ ನಾವು ಬದುಕುತ್ತಿದ್ದೇವೆ. ಇಂದಿನ ಯುವ ಪೀಳಿಗೆಯ ಭಾಷೆ ನಮಗೆ ಅರ್ಥವಾಗದಿದ್ದರೂ ಅವರ ಮನಸ್ಸನ್ನು ಅರ್ಥಮಾಡಿಕೊಳ್ಳುವ ಪ್ರಯತ್ನ ಮಾಡಬೇಕು. ಯುವಜನತೆಗೆ ಹಿರಿಯರಾದ ನಾವುಗಳು ಮಾದರಿಯಾಗಬೇಕಾಗಿದೆ ಎಂದು ಹೇಳಿದರು.ಸುಳ್ಳನ್ನು ಸತ್ಯಕ್ಕಿಂತ ಜೋರಾಗಿ ಹೇಳುವ ಕಾಲದಲ್ಲಿ ಸತ್ಯವನ್ನು ಸುಳ್ಳಿಗಿಂತ ಜೋರಾಗಿ ಹೇಳುವ ಅಗತ್ಯವಿದೆ ಎಂದು ಅವರು ಕರೆ ನೀಡಿದರು.ಪ್ರವಾದಿ ಮುಹಮ್ಮದ್ ಅವರು ಕೇವಲ ಆರಾಧನೆಯನ್ನಷ್ಟೇ ಬೋಧಿಸದೆ, ನೆರೆಹೊರೆಯವರ ಹಕ್ಕು, ಮಾನವೀಯತೆ, ಪರಸ್ಪರ ಗೌರವ, ಪ್ರೀತಿ, ಕರುಣೆ ಮತ್ತು ಸಾಮಾಜಿಕ ಜವಾಬ್ದಾರಿಯನ್ನೂ ಬೋಧಿಸಿದರು. ಯಾರ ಕೈ ಮತ್ತು ಬಾಯಿಯಿಂದ ನೆರೆಹೊರೆಯವರು ಸುರಕ್ಷಿತರಾಗಿರುವುದಿಲ್ಲವೋ, ಅವನು ನಿಜವಾದ ವಿಶ್ವಾಸಿಯಲ್ಲ ಎಂಬ ಪ್ರವಾದಿ ಅವರ ಬೋಧನೆಯನ್ನು ಅವರು ಉಲ್ಲೇಖಿಸಿದರು.ತಾನು ಇಷ್ಟಪಡುವುದನ್ನು ತನ್ನ ಸಹೋದರನಿಗೂ ಇಷ್ಟಪಡುವ ತನಕ ಒಬ್ಬನು ಪರಿಪೂರ್ಣ ವಿಶ್ವಾಸಿಯಾಗಲಾರ ಎಂಬ ಪ್ರವಾದಿ ಅವರ ಬೋಧನೆಯ ಮೂಲಕ ಪರಸ್ಪರ ಪ್ರೀತಿ ಮತ್ತು ಸಹಾನುಭೂತಿಯ ಮಹತ್ವವನ್ನು ವಿವ–ರಿಸಿದರು.ಪ್ರವಾದಿ ಅವರ ಜೀವನವು ತೆರೆದ ಪುಸ್ತಕದಂತಿದ್ದು, ಮನುಷ್ಯನನ್ನು ಸಂಸ್ಕರಿಸುವ ಮತ್ತು ಸಮಾಜವನ್ನು ಉತ್ತಮಗೊಳಿಸುವ ಕಾರ್ಯವನ್ನು ಅವರು ಮಾಡಿದರು. ಕುಟುಂಬಕ್ಕೆ, ಸಮಾಜಕ್ಕೆ ಹಾಗೂ ದೇಶಕ್ಕೆ ಮೋಸ ಮಾಡದ ಪ್ರಾಮಾಣಿಕ ಜೀವನವನ್ನು ಅವರು ಬೋಧಿಸಿದರು. ಒಂದು ನಾಡು ಬಲಿಷ್ಠವಾಗಬೇಕಾದರೆ ಆ ನಾಡಿನ ಜನರ ನಡುವಿನ ಪರಸ್ಪರ ಸಂಬಂಧಗಳು ಬಲಿಷ್ಠವಾಗಬೇಕು. ಪ್ರವಾದಿ ಪರಸ್ಪರ ಗೌರವದ ಸಂದೇಶವನ್ನು ಜಗತ್ತಿಗೆ ನೀಡಿದರು. ಅವರು ಈ ಜಗತ್ತಿಗೆ ಕರುಣೆಯಾಗಿ ಕಳುಹಿಸಲ್ಪಟ್ಟ ಪ್ರವಾದಿಯಾಗಿದ್ದಾರೆ. ಪರಸ್ಪರ ಪ್ರೀತಿ ಮತ್ತು ಕರುಣೆಯಿಂದ ಬದುಕುವುದ–ರಿಂದ ಸಮಾಜದಲ್ಲಿ ಸಂತೋಷ ಮತ್ತು ನೆಮ್ಮದಿ ಹೆಚ್ಚುತ್ತದೆ ಎಂದು ಹೇಳಿದರು.ಮಹಿಳೆಯ–ರಿಗಾಗಿ ಪ್ರಬಂಧ ಸ್ಪರ್ಧೆ ಜಮಾಅತೆ ಇಸ್ಲಾಮಿ ಹಿಂದ್ ಮಹಿಳಾ ವಿಭಾಗದ ವತಿಯಿಂದ ಸೀರತ್ ಅಭಿಯಾನದ ಅಂಗವಾಗಿ ಮುಸ್ಲಿಂ ಹಾಗೂ ಮುಸ್ಲಿಮೇತರ ಮಹಿಳೆಯರಿಗಾಗಿ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ಸ್ಪರ್ಧೆಯಲ್ಲಿ ಭಾಗವಹಿಸಿದವರಿಗೆ ಅಭಿನಂದನೆ ಸಲ್ಲಿಸಿ, ವಿಜೇತ–ರಿಗೆ ಬಹುಮಾನ ಹಾಗೂ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.2,000ಕ್ಕೂ ಅಧಿಕ ಜನರ ಉಪಸ್ಥಿತಿವಿಚಾರಗೋಷ್ಠಿಯಲ್ಲಿ ಪುರುಷರು ಮತ್ತು ಮಹಿಳೆಯರು ಸೇರಿದಂತೆ ಸುಮಾರು 2,000 ಜನರು ಭಾಗವಹಿಸಿದ್ದು, ವಿವಿಧ ಧರ್ಮ, ಸಮುದಾಯ ಹಾಗೂ ಕ್ಷೇತ್ರಗಳ ಜನರು ಒಂದೇ ವೇದಿಕೆಯಲ್ಲಿ ಸೇರಿ ಪ್ರೀತಿ, ಮಾನವೀಯತೆ, ಸಹೋದರತ್ವ ಮತ್ತು ಸೌಹಾರ್ದತೆಯ ಸಂದೇಶವನ್ನು ಹಂಚಿಕೊಂಡರು. ಕಾರ್ಯಕ್ರಮವು ಸಿಂಧನೂರಿನ ಭಾವೈಕ್ಯತೆ ಮತ್ತು ಸಾಮಾಜಿ–ಕ ಸೌಹಾರ್ದತೆಗೆ ಮತ್ತೊಂದು ಉತ್ತಮ ನಿದರ್ಶನವಾಯಿತು.ಕಾರ್ಯಕ್ರಮದ ಕೊನೆಯಲ್ಲಿ ಶ್ರೀ ಎಸ್. ಶರಣೇಗೌಡ ಪಾಟೀಲ್ ಅವರು ಧನ್ಯವಾದಗಳನ್ನು ಅರ್ಪಿಸಿದರು.ಕಾರ್ಯಕ್ರಮದ ಯಶಸ್ಸಿಗೆ ಸ್ವಾಗತ ಸಮಿತಿಯ ಸದಸ್ಯರಾದ ವಲಿ ಸಾಬ್ ಮಿಟ್ಟಮನಿ, ಖಾಜಿ ಜಾವಿದ್ ಸಾಬ್, ಶಫಿವುಲ್ಲಾ ಖಾನ್, ನೂರ್ ಖಾನ್, ಸೋಹೈಲ್ ಅಂಬರ್ ಖಾನ್ ದೇಸಾಯಿ, ಹಾಜಿ ರಾಜಾಹುಸೇನ್ ಹಿಮಾಯತಿ, ನಬೀಸಾಬ್, ಅಬುಲೇಸ್ ನೈಕ್, ನಯೀಮ್ ಇರ್ಫಾನ್ ಹಾಗೂ ಅಫ್ಜಲ್ ಹುಸೈನ್ ಸೇರಿದಂತೆ ಅನೇಕರು ಸಹಕರಿಸಿದರು.ಒಟ್ಟಾರೆ, “ಕ್ರಾಂತಿಯ ಜ್ಯೋತಿ ಪ್ರವಾದಿ ಮುಹಮ್ಮದ್” ವಿಚಾರಗೋಷ್ಠಿಯು ಪ್ರವಾದಿ ಮುಹಮ್ಮದ್ ಅವರ ಜೀವನ ಮತ್ತು ಮಾನವೀಯ ಸಂದೇಶವನ್ನು ಸಮಾಜದ ಎಲ್ಲ ವರ್ಗಗಳಿಗೂ ಪರಿಚಯಿಸುವುದರ ಜೊತೆಗೆ, ಸಿಂಧನೂರಿನಲ್ಲಿ ಭಾವೈಕ್ಯತೆ, ಶಾಂತಿ, ಸಹೋದರತ್ವ ಮತ್ತು ಸೌಹಾರ್ದತೆಯ ಸಂದೇಶವನ್ನು ಬಲಪಡಿಸುವಲ್ಲಿ ಯಶಸ್ವಿಯಾಯಿತು.

ರಾಜ್ಯ ಸರ್ಕಾರ ರೈತರನ್ನು ಸಂಕಷ್ಟಕ್ಕೆ ತಳ್ಳಿದೆ: ಮಾಜಿ ಶಾಸಕ ನಡಹಳ್ಳಿ

❏ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಜಿಲ್ಲೆಯ 13 ತಾಲೂಕುಗಳ ಪೈಕಿ ಕೇವಲ ಆರು ತಾಲೂಕುಗಳನ್ನು ಬರಪೀಡಿತವೆಂದು ಘೋಷಿಸಿ,ಉಳಿದ ಏಳು ತಾಲೂಕುಗಳ ರೈತರನ್ನು ರಾಜ್ಯ ಸರ್ಕಾರ ಸಂಕಷ್ಟಕ್ಕೆ ತಳ್ಳಿದೆ ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್. ಪಾಟೀಲ ನಡಹಳ್ಳಿ ಹೇಳಿದರು.

ಭಾನುವಾರ ಪಟ್ಟಣದ ಪ್ರವಾಸಿ ಮಂದಿರ ಮುಂಭಾಗದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ 11 ದಿನಗಳಿಂದ ನಡೆಯುತ್ತಿರುವ ಅನಿರ್ದಿಷ್ಟ ಅಹೋರಾತ್ರಿ ಧರಣಿ ಸ್ಥಳಕ್ಕೆ ಭೇಟಿ ನೀಡಿ ರೈತರ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿ ಅವರು ಮಾತನಾಡಿದರು.‘ರಾಜ್ಯದಲ್ಲಿ ಹಿಂದೆಂದೂ ಕಾಣದಂತಹ ಭೀಕರ ಬರದ ಪರಿಸ್ಥಿತಿ ನಿರ್ಮಾಣವಾಗಿದೆ. ರೈತರು ಬೆಳೆ



ಕಳೆದುಕೊಂಡು ಸಂಕಷ್ಟದಲ್ಲಿರುವಾಗ ನೆರವಿಗೆ ನಿಲ್ಲಬೇಕಾದ ಸರ್ಕಾರ ತನ್ನ ಜವಾಬ್ದಾ–ರಿಯಿಂದ ನುಣುಚಿಕೊಳ್ಳುತ್ತಿದೆ. ಕೇಂದ್ರದತ್ತ ಬೆರಳು ತೋರಿಸುವ ಬದಲು ಮೊದಲು ರಾಜ್ಯ ಸರ್ಕಾರವೇ ರೈತರ ನೆರವಿಗೆ ಧಾವಿಸಬೇಕು’ ಎಂದು ನಡಹಳ್ಳಿ ಒತ್ತಾಯಿಸಿದರು.ಮುಂಗಾರು ಹಾಗೂ ಹಿಂಗಾರು ಬೆಳೆ ನಷ್ಟಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಂಟಿಯಾಗಿ ಪ್ರತಿ ಎಕರೆಗೆ ಕನಿಷ್ಠ 50 ಸಾವಿರ ಪರಿಹಾರ ಘೋಷಿಸಬೇಕು. ಬರಪೀಡಿತ ತಾಲೂಕುಗಳ ವ್ಯಾಪ್ತಿಯನ್ನು ವಿಸ್ತರಿಸಿ ಎಲ್ಲ ಸಂಕಷ್ಟದಲ್ಲಿರುವ ರೈತರಿಗೂ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದರು.‘ಇದು ರಾಜಕೀಯ ಹೋರಾಟವಲ್ಲ; ರೈತರ ಬದುಕಿನ ಹೋರಾಟ. ರೈತ ಸಂಘಟನೆಗಳು ಕರೆ ನೀಡುವ ಎಲ್ಲ ಹೋರಾಟಕ್ಕೂ ರೈತರಾಗಿ ಬೆಂಬಲ ನೀಡುತ್ತೇವೆ’ ಎಂದು ನಡಹಳ್ಳಿ ಭರವಸೆ ನೀಡಿದರು. ತಾಳಿಕೋಟಿ ಪಟ್ಟಣವನ್ನು ಬಂದ್ ಮಾಡಿ ಹೋರಾಟ ನಡೆಸುವ ಯೋಜನೆವಿದೆ, ಇದನ್ನು ಸ್ಥಳೀಯ ಮುಖಂಡರು ಹಾಗೂ ವಿವಿಧ ಗ್ರಾಮಗಳ ರೈತ ಮುಖಂಡರೊಂದಿಗೆ ಚರ್ಚಿಸಿ ಇನ್ನೆರಡು ದಿನಗಳಲ್ಲಿ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗದು ಎಂದು ತಿಳಿಸಿದರು. ಅಖಂಡ ಕರ್ನಾಟಕ ರೈತ ಸಂಘದ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ, ಜಿ.ಪಂ.ಮಾಜಿ ಸದಸ್ಯ ಬಸನಗೌಡ ಒಣ–ಕ್ಯಾಳ, ಡಿ.ಕೆ. ಪಾಟೀಲ ಹಾಗೂ ರವೀಂದ್ರ ಕಟ್ಟಿಮನಿ ಮಾತನಾಡಿದರು. ಈ ಸಮಯದಲ್ಲಿ ಮುಖಂಡರಾದ ಮಾನಸಿಂಗ್ ಕೊಕಟನೂರ, ಜೈಸಿಂಗ್ ಮೂಲಿಮನಿ, ತಾಪಂ ಮಾಜಿ ಸದಸ್ಯ ರಾಜುಗೌಡ ಕೋಳೂರ, ಶಂಕರಗೌಡ ದೇಸಾಯಿ, ರಾಜುಗೌಡ ಗುಂಡಕನಾಳ,ಶಿವಶಂಕರ ಹಿರೇಮಠ, ಮುದಕಪ್ಪ ಬಡಿಗೇರ,ವಿಠ್ಠಲ್ ಮೋಹಿತೆ, ಚಂದ್ರಶೇಖರ ಅಲದಿ, ರೈತ ಸಂಘದ ತಾಲೂಕ ಅಧ್ಯಕ್ಷ ಬಾಳಪ್ಪಗೌಡ ಲಿಂಗದಳ್ಳಿ, ಉಪಾಧ್ಯಕ್ಷ ರಾಮನಗೌಡ ಹಾದಿಮನಿ,ಕಳಕೂಸ ರಂಗರೇಜ, ಗೌಡಪ್ಪಗೌಡ ಮಾಳಿ,ವಿಶ್ವನಾಥಗೌಡ ಲಕ್ಕುಂಡಿ, ಭೀಮನಗೌಡ ಪಾಟೀಲ, ಎನ್.ಎಂ.ದೇಸಾಯಿ,ರಾಘು ಮಾನೆ, ರಮೇಶ ಮೂಕಿಹಾಳ ಹಾಗೂ ವಿವಿಧ ಗ್ರಾಮಗಳ ರೈತರು ಇದ್ದರು.

ಬರ ಘೋಷಿಸದಿದ್ದರೆ ತಾಳಿಕೋಟೆಯಲ್ಲಿ ಉಗ್ರ ಹೋರಾಟ

❏ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ವಿಜಯಪುರ ಜಿಲ್ಲೆಯಲ್ಲಿ ಬರದ ಪರಿಸ್ಥಿತಿ ತೀವ್ರವಾಗಿದ್ದರೂ ಮುದ್ದೇಬಿಹಾಳ ಹಾಗೂ ತಾಳಿಕೋಟಿ ತಾಲೂಕುಗಳನ್ನು ಬರಪೀಡಿತ ಪಟ್ಟಿಯಿಂದ ಹೊರಗಿಟ್ಟಿರುವುದು ರೈತರಿಗೆ ಮಾಡಿರುವ ಅನ್ಯಾಯ. ಸರ್ಕಾರ ಕೂಡಲೇ ಎರಡೂ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸದಿದ್ದರೆ ತಾಳಿಕೋಟೆಯಲ್ಲಿ ಬಿಜೆಪಿಜೆಡಿಎಸ್ ನೇತೃತ್ವದಲ್ಲಿ ಬೃಹತ್ ಹೋರಾಟ ನಡೆಸಲಾಗುವುದು ಎಂದು ಬಿಜೆಪಿ ರಾಜ್ಯ ರೈತ ಮೋರ್ಚಾ ಅಧ್ಯಕ್ಷ ಎ.ಎಸ್. ಪಾಟೀಲ ನಡಹಳ್ಳಿ ಹೇಳಿದರು.ಪಟ್ಟಣದ ಪ್ರವಾಸಿ ಮಂದಿರದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಳೆ ಕೊರತೆ, ಬೆಳೆ ಹಾನಿ ಹಾಗೂ ಕೃಷಿ ಸಂಕಷ್ಟದಿಂದ ರೈತರು ಕಂಗಾಲಾಗಿದ್ದಾರೆ. ಇಂತಹ ಸಂದರ್ಭದಲ್ಲಿ ಜಿಲ್ಲೆಯ ಕೆಲ ತಾಲೂಕುಗಳನ್ನು ಮಾತ್ರ ಬರಪೀಡಿತ ಎಂದು ಘೋಷಿಸಿ, ಮುದ್ದೇಬಿಹಾಳ ವಿಧಾನಸಭಾ ಕ್ಷೇತ್ರದ ಮುದ್ದೇಬಿಹಾಳ ಹಾಗೂ ತಾಳಿಕೋಟಿ ತಾಲೂಕುಗಳನ್ನು ಕೈಬಿಟ್ಟಿರುವುದು ಸರ್ಕಾರದ ತಾರತಮ್ಯ ನೀತಿಗೆ ಸಾಕ್ಷಿ ಎಂದು ಆರೋಪಿಸಿದರು.ಬರ ಘೋಷಣೆಯಾಗದ ಕಾರಣ ರೈತರಿಗೆ ಬರ ಪರಿಹಾರ ಸೇರಿದಂತೆ ಸರ್ಕಾರದ ವಿವಿಧ ಸೌಲಭ್ಯಗಳು ಕೈತಪ್ಪುವ ಆತಂಕವಿದೆ. ಹೀಗಾಗಿ ಯಾವುದೇ ವಿಳಂಬ



ಮಾಡದೆ ಎರಡೂ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕು ಎಂದು ಒತ್ತಾಯಿಸಿದರು. ಇದು ಯಾವುದೇ ವ್ಯಕ್ತಿ ಅಥವಾ ಪಕ್ಷದ ವಿರುದ್ಧದ ಹೋರಾಟವಲ್ಲ. ಸಂಕಷ್ಟದಲ್ಲಿರುವ ರೈತರ ಹಕ್ಕಿಗಾಗಿ ನಡೆಯುವ ಹೋರಾಟ. ಸರ್ಕಾರ ಕೂಡಲೇ ಬರ ಘೋಷಿಸಿದರೆ ಹೋರಾಟದ ಅಗತ್ಯವೇ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಮುದ್ದೇಬಿಹಾಳ ಬಂದ್ ಮಾದರಿಯಲ್ಲಿ ತಾಳಿಕೋಟೆಯಲ್ಲೂ ಹೋರಾಟಮುದ್ದೇಬಿಹಾಳ ಬಂದ್‌ಗೆ ಹಿಂದೂಮುಸ್ಲಿಂ ಸೇರಿದಂತೆ ಎಲ್ಲ ಸಮುದಾಯಗಳ ವ್ಯಾಪಾರಸ್ಥರು ಸ್ವಯಂಪ್ರೇ–ರಿತವಾಗಿ ಬೆಂಬಲ ನೀಡಿರುವುದು ರೈತರ ಸಮಸ್ಯೆಯ ತೀವ್ರತೆಯನ್ನು ತೋರಿಸುತ್ತದೆ. ಇದೇ ಒಗ್ಗಟ್ಟನ್ನು ತಾಳಿಕೋಟೆಯಲ್ಲೂ ರೂಪಿಸಿ ಬೃಹತ್ ಹೋರಾಟ ನಡೆಸಲಾಗುವುದು ಎಂದರು. ರೈತ ಮುಖಂಡರು, ವ್ಯಾಪಾರಸ್ಥರು, ವಿವಿಧ ಸಂಘಟನೆಗಳು ಹಾಗೂ ಜನಪರ ಮುಖಂಡರನ್ನು ವಿಶ್ವಾಸಕ್ಕೆ ಪಡೆದು ಹೋರಾಟದ ರೂಪುರೇಷೆ ಸಿದ್ಧಪಡಿಸಲಾಗುವುದು. ದೇವರಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ, ಮಾಜಿ ಶಾಸಕ ಸೋಮನಗೌಡ ಪಾಟೀಲ ಸಾಸನೂರ ಸೇ–ರಿದಂತೆ ಮುಖಂಡರೊಂದಿಗೆ ಚರ್ಚಿಸಿ ಹೋರಾಟದ ದಿನಾಂಕ ಪ್ರಕಟಿಸಲಾಗುವುದು. ಹಬ್ಬಗಳ ಹಿನ್ನೆಲೆಯಲ್ಲಿ ಸಾರ್ವಜನಿಕ–ರಿಗೆ ತೊಂದರೆಯಾಗದಂತೆ ದಿನಾಂಕ ನಿಗದಿಪಡಿಸಲಾಗುವುದು ಎಂದರು.‘ಸಾಮಾನ್ಯ ಪ್ರತಿಭಟನೆ ಅಲ್ಲ’ ತಾಳಿಕೋಟೆಯಲ್ಲಿ ಕೇವಲ ಸಾಂಕೇತಿಕ ಪ್ರತಿಭಟನೆ ನಡೆಸುವುದಿಲ್ಲ. ರೈತರ ಹಕ್ಕಿಗಾಗಿ ಐತಿಹಾಸಿಕ ಹೋರಾಟ ರೂಪಿಸಲಾಗುವುದು. ಬಿಜೆಪಿಜೆಡಿಎಸ್ ಜಟಿಯಾಗಿ ಹೋರಾಟ ನಡೆಸಿ ಸರ್ಕಾರದ ಮೇಲೆ ಒತ್ತಡ ತರಲಿದೆ. ಮುದ್ದೇಬಿಹಾಳ ಹಾಗೂ ತಾಳಿಕೋಟಿ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿ ರೈತರಿಗೆ ನ್ಯಾಯ ದೊರೆಯುವವರೆಗೆ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂದು ನಡಹಳ್ಳಿ ಎಚ್ಚ–ರಿಸಿದರು.ಈ ಸಂದರ್ಭದಲ್ಲಿ ಶಂಕರಗೌಡ ದೇಸಾಯಿ, ವಿಶ್ವನಾಥರೆಡ್ಡಿ ಲಕ್ಕುಂಡಿ, ಬಸನಗೌಡ ವಣಿಕ್ಯಾಳ, ಗೌಡಪ್ಪಗೌಡ ಮಾಳಿ, ಎಂ.ಎಂ. ಪಾಟೀಲ ಸಾಲವಾಡಗಿ, ರಾಜುಗೌಡ ಕೋಳೂರ, ರಾಜುಗೌಡ ಗುಂಡಾಕನಾಳ, ಶಿವಶಂಕರ ಹಿರೇಮಠ, ಬಾಬುಗೌಡ ಕೊಡಗಾನೂರ, ಮಲ್ಲನಗೌಡ ಕೊಡಗಾನೂರ ಮತ್ತಿತರರು ಇದ್ದರು.

ನೇಮಕಾತಿ ಪ್ರಕಟಣೆ

ಕರ್ನಾಟಕ ಸಮಾಜ ಕಲ್ಯಾಣ ಇಲಾಖೆ ನೇಮಕಾತಿ 2026 – 140 ವಸತಿ ಶಾಲೆ ಶಿಕ್ಷಕರ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಆಗಸ್ಟ್ 24, 2026

ಕರ್ನಾಟಕ ಸಮಾಜ ಕಲ್ಯಾಣ ಇಲಾಖೆ (SWD) ನೇಮಕಾತಿ 2026: ವಸತಿ ಶಾಲೆ ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (KEA) ಆಗಸ್ಟ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 18–ಸೆಪ್ಟೆಂಬರ್–2026 ರೊಳಗೆ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: ce-tonline.karnataka.gov.in

ಚಿಕ್ಕಹೊನ್ನಕುಣಿಯಲ್ಲೇ ನೀರಾವರಿ ಇಲಾಖೆ ಉಳಿಸಿ: ಪ್ರಾಂತ ರೈತ ಸಂಘ ಆಗ್ರಹ
ಕಚೇರಿ ಸ್ಥಳಾಂತರದ ನಿರ್ಧಾರ ಕೈಬಿಡದಿದ್ದರೆ ಬೃಹತ್ ಪ್ರತಿಭಟನೆ: ಎಚ್ಚರಿಕೆ

❑ ನೈಜ್ಯ ದೆಸೆ ನ್ಯೂಸ್

ದೇವದುರ್ಗ,: ರೈತರ ಸಮಸ್ಯೆಗಳಿಗೆ ಸ್ಥಳದಲ್ಲೇ ಸ್ಪಂದಿಸಬೇಕಾದ ನಾರಾಯಣಪುರ ಬಲದಂಡೆ ಕಾಲುವೆಯ ಚಿಕ್ಕಹೊನ್ನಕುಣಿ ವಿಭಾಗ ಸಂಖ್ಯೆ 6ರ ನೀರಾವರಿ ಇಲಾಖೆಯ ಕಚೇರಿಯನ್ನು ರಾಯಚೂರಿಗೆ ಸ್ಥಳಾಂತರಿಸುವ ಕ್ರಮಕ್ಕೆ ಕರ್ನಾಟಕ ಪ್ರಾಂತ ರೈತ ಸಂಘದ ದೇವದುರ್ಗ ತಾಲೂಕು ಸಮಿತಿ ತೀವ್ರ ವಿರೋಧ ವ್ಯಕ್ತಪಡಿಸಿದೆ. ಕಚೇರಿ ಸ್ಥಳಾಂತರಿಸುವ ನಿರ್ಧಾರವನ್ನು ಕೂಡಲೇ ಕೈಬಿಟ್ಟು, ಚಿಕ್ಕಹೊನ್ನಕುಣಿಯಲ್ಲೇ ಕಚೇರಿಯನ್ನು ಮುಂದುವರಿಸಬೇಕು ಎಂದು ಸಂಘ ಆಗ್ರಹಿಸಿದೆ.ಈ ಕುರಿತು ಮಾಧ್ಯಮದವರೊಂದಿಗೆ



ಮಾತನಾಡಿದ ಸಂಘದ ತಾಲೂಕು ಅಧ್ಯಕ್ಷ ಹನುಮಂತ ಗುರಿಕಾರ ಹಾಗೂ ಕಾರ್ಯದರ್ಶಿ ಮೌನೇಶ ಜಾಲಹಳ್ಳಿ, ಚಿಕ್ಕಹೊನ್ನಕುಣಿಯಲ್ಲಿರುವ ನೀರಾವರಿ ಕಚೇರಿ ಸುತ್ತಮುತ್ತಲಿನ ಸಾವಿರಾರು ರೈತರಿಗೆ ನೇರ ಸಂಪರ್ಕದ ಕೇಂದ್ರವಾಗಿದೆ. ಕಾಲುವೆ ನಿರ್ವಹಣೆ, ನೀರು ಹರಿವು, ಕಾಲುವೆ ದುರಸ್ತಿ, ನೀರಿನ ಕೊರತೆ ಹಾಗೂ ಬೆಳೆಗಳಿಗೆ ಸಂಬಂಧಿಸಿದ ತುರ್ತು ಸಮಸ್ಯೆಗಳನ್ನು ರೈತರು ಅಧಿಕಾರಿಗಳ ಗಮನಕ್ಕೆ ತಂದು ಸ್ಥಳದಲ್ಲೇ ಪರಿಹಾರ ಪಡೆಯಲು ಈ ಕಚೇರಿ ಅತ್ಯಂತ ಅನುಕೂಲವಾಗಿದೆ ಎಂದು ತಿಳಿಸಿದರು."ನೀರಾವರಿ ಇಲಾಖೆ ರೈತರಿಗೆ ಅನುಕೂಲ ಕಲ್ಪಿಸಬೇಕೇ ಹೊರತು, ರೈತರಿಂದ ದೂರವಾಗಬಾರದು. ಕಾಲುವೆಯಲ್ಲಿ ನೀರು ನಿಂತಾಗ, ಕಾಲುವೆ ಒಡೆದಾಗ ಅಥವಾ ಬೆಳೆಗಳಿಗೆ ನೀರಿನ ಕೊರತೆಯಾದಾಗ ರೈತರು ದೂರದ ರಾಯಚೂರಿನ ಕಚೇರಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು" ಎಂದು ಅವರು ಹೇಳಿದರು.ಚಿಕ್ಕಹೊನ್ನಕುಣಿ ವಿಭಾಗ ಸಂಖ್ಯೆ 6ರ ನೀರಾವರಿ ಕಚೇರಿಯನ್ನು ರಾಯಚೂರಿಗೆ ಸ್ಥಳಾಂತರಿಸುವ ಪ್ರಕ್ರಿಯೆಯನ್ನು ತಕ್ಷಣವೇ ಸ್ಥಗಿತಗೊಳಿಸಿ, ಇದೇ ಸ್ಥಳದಲ್ಲಿ ಕಚೇರಿಯನ್ನು ಮುಂದುವರಿಸಬೇಕು. ಇಲ್ಲವಾದಲ್ಲಿ ಸರ್ಕಾರ ಹಾಗೂ ನೀರಾವರಿ ಇಲಾಖೆ ಅಧಿಕಾರಿಗಳ ವಿರುದ್ಧ ಕರ್ನಾಟಕ ಪ್ರಾಂತ ರೈತ ಸಂಘದ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.
ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

ಸಿಂಧನೂರಿನ ಹೋಲಿ ಫ್ಯಾಮಿಲಿ ಚರ್ಚ್‌ನಲ್ಲಿ ಭಕ್ತಿಭಾವದಿಂದ ಕುಟುಂಬ ದಿನಾಚರಣೆ



❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು : ನಗರದ ಹೋಲಿ ಫ್ಯಾಮಿಲಿ ಚರ್ಚ್‌ನಲ್ಲಿ ಇಂದು ತಾಯಿ ದೇವಮಾತೆ ಮರಿಯಮ್ಮನವರಿಗೆ ಸಮರ್ಪಣೆಯಾಗಿ ಕುಟುಂಬ ದಿನಾಚರಣೆಯನ್ನು ಭಕ್ತಿಭಾವ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.ಈ ಪ್ರಯುಕ್ತ ತಾಯಿ ಮರಿಯಮ್ಮನವರ ಭವ್ಯ ತೇರನ್ನು ಮೆರವಣಿಗೆಯ ಮೂಲಕ ಕೊಂಡೊಯ್ಯಲಾಯಿತು. ಫಾದರ್ ಜ್ಞಾನ ಪ್ರಕಾಶ್ ಹಾಗೂ ಫಾದರ್ ಮರಿಸ್ವಾಮಿ ಅವರ ನೇತೃತ್ವದಲ್ಲಿ ದಿವ್ಯ ಬಲಿಪೂಜೆ ನೆರವೇರಿಸಲಾಯಿತು. ಕುಟುಂಬಗಳ ಏಕತೆ, ಪ್ರೀತಿ, ಪರಸ್ಪರ ಸಹಕಾರ ಹಾಗೂ ದೇವಮಾತೆಯ ಆಶೀರ್ವಾದಕ್ಕಾಗಿ ವಿಶೇಷ ಕುಟುಂಬ ದಿನದ ಪ್ರಾರ್ಥನೆಗಳನ್ನು ಸಲ್ಲಿಸಲಾಯಿತು.ಕಾರ್ಯಕ್ರಮದಲ್ಲಿ ಮಕ್ಕಳು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಎಲ್ಲರ ಗಮನ ಸೆಳೆದರು. ಮಕ್ಕಳ ಪ್ರತಿಭೆ ಹಾಗೂ ಉತ್ಸಾಹವು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು.ನಂತರ ಭಕ್ತಾದಿಗಳಿಗೆ ದೇವಮಾತೆಯ ಪ್ರಸಾದವನ್ನು ವಿತರಿಸಲಾಯಿತು. ಕುಟುಂಬಗಳಲ್ಲಿ ಪ್ರೀತಿ, ಶಾಂತಿ, ಸೌಹಾರ್ದತೆ ಮತ್ತು ನಂಬಿಕೆ ಸದಾ ನೆಲೆಸಿರಲಿ ಎಂಬ ಆಶಯದೊಂದಿಗೆ ಕುಟುಂಬ ದಿನಾಚರಣೆ ಅರ್ಥಪೂರ್ಣವಾಗಿ ನೆರವೇರಿತು.ಈ ಸಂದರ್ಭದಲ್ಲಿ ಚರ್ಚಿನ ಧರ್ಮಗುರುಗಳು, ಧಾರ್ಮಿಕ ಸೇವಕರು, ಕುಟುಂಬಸ್ಥರು, ಮಕ್ಕಳು ಹಾಗೂ ಅಪಾರ ಸಂಖ್ಯೆಯ ಭಕ್ತಾದಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ವರಮಯ್ಯ ಕಾಲನಿಗೆ ನೀರಿಲ್ಲ, ರಸ್ತೆ ಸೌಕರ್ಯವೂ ಇಲ್ಲ!

❑ ನೈಜ್ಯ ದೆಸೆ ನ್ಯೂಸ್



ಸಿರುಗುಪ್ಪ: ಮನೆಮನೆಗಳಿಗೆ ನಳ ಸಂಪರ್ಕ ಕಲ್ಪಿಸಿದ್ದರೂ ಕುಡಿಯುವ ನೀರು ಪೂರೈಕೆಯಾಗದೆ, ಮಳೆ ಬಂದರೆ ರಸ್ತೆಗಳು ಕೆಸರುಗದ್ದೆಯಾಗಿ ಮಾರ್ಪಡುವುದರಿಂದ ಬಲಕುಂದಿ ಗ್ರಾಪಂ ವ್ಯಾಪ್ತಿಯ ವರಮಯ್ಯ ಕಾಲನಿ ನಿವಾಸಿಗಳು ಸಂಕಷ್ಟ ಎದುರಿಸುತ್ತಿದ್ದಾರೆ.ಕಾಲನಿಯಲ್ಲಿ 50ಕ್ಕೂ ಹೆಚ್ಚು ಮನೆಗಳಿದ್ದು, 250ರಿಂದ 300 ಜನ ವಾಸಿಸುತ್ತಿದ್ದಾರೆ. ಜಲಜೀವನ್ ಮಿಷನ್ ಯೋಜನೆಯಡಿ ನಳ ಸಂಪರ್ಕ ಕಲ್ಪಿಸಲಾಗಿದ್ದರೂ, ಶುದ್ಧ ನೀರು ಮಾತ್ರ ಪೂರೈಕೆಯಾಗುತ್ತಿಲ್ಲ. ಕೆರೆಗೆ ಎಲ್‌ಎಲ್‌ಸಿ ಕಾಲುವೆ ನೀರು ತುಂಬಿಸಿ, ಶುದ್ಧೀಕರಣವಿಲ್ಲದೆ ಮನೆಗಳಿಗೆ ಪೂರೈಸಲಾಗುತ್ತಿದೆ. ಮಳೆಗಾಲದಲ್ಲಿ ಕೆಸರು ಮಿಶ್ರಿತ ನೀರು ಬರುತ್ತಿದೆ ಎಂದು ನಿವಾಸಿಗಳು ಆರೋಪಿಸಿದ್ದಾರೆ.ಕೆರೆಯ ಸುತ್ತ ರಕ್ಷಣಾಗೋಡೆ ಇಲ್ಲದಿರುವುದರಿಂದ ನೀರಿನ ಸುರಕ್ಷತೆ ಬಗ್ಗೆಯೂ ಆತಂಕ ವ್ಯಕ್ತವಾಗಿದೆ. ನೀರಿನ ಗುಣಮಟ್ಟ ಪರಿಶೀಲಿಸಿ, ಶುದ್ಧೀಕರಣ ಘಟಕ ಅಳವಡಿಸುವಂತೆ ನಿವಾಸಿಗಳು ಆಗ್ರಹಿಸಿದ್ದಾರೆ.ಇದಲ್ಲದೆ, ಕಾಲನಿಯ ಸಂಪರ್ಕ ರಸ್ತೆ ಮಳೆಯಲ್ಲಿ ಕೆಸರುಮಯವಾಗುವುದರಿಂದ ಶಾಲಾ ಮಕ್ಕಳು, ಶಿಕ್ಷಕರು ಹಾಗೂ ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಸಮಸ್ಯೆ ಕುರಿತು ಗ್ರಾಪಂ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ ಎಂದು ನಿವಾಸಿಗಳು ಅಸಮಾಧಾನ ವ್ಯಕ್ತಪಡಿಸಿದ್ದಾರೆ."ವರಮಯ್ಯ ಕಾಲನಿಗೆ ಶುದ್ಧೀಕರಣ ಘಟಕ ಅಳವಡಿಸುವ ಕುರಿತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು."ಶಶಿಕಾಂತ್, ಉಪಕಾರ್ಯದರ್ಶಿ, ಬಳ್ಳಾರಿ ಜಿಪಂವರದಿ: ಮಸೀದಿ ಅಬ್ದುಲ್ ಗೌಸ್, ಸಿರುಗುಪ್ಪ

ಜಾಲಹಳ್ಳಿ ಗ್ರಾಮ ಪಂಚಾಯಿತಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸಲು ಶಾಸಕರಿಗೆ ಕರವೇ ಮನವಿ
ವಿಧಾನಸಭೆ ಅಧಿವೇಶನದಲ್ಲಿ ವಿಷಯ ಪ್ರಸ್ತಾಪಿಸಿ ಸರ್ಕಾರದ ಗಮನಕ್ಕೆ ತರಲು ಕರವೇ ಒತ್ತಾಯ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ, ಸೆ.12: ದೇವದುರ್ಗ ತಾಲೂಕಿನ ಪ್ರಮುಖ ಹಾಗೂ ಅತಿ ದೊಡ್ಡ ಪಟ್ಟಣಗಳಲ್ಲಿ ಒಂದಾಗಿರುವ ಜಾಲಹಳ್ಳಿ ಗ್ರಾಮ ಪಂಚಾಯಿತಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸಲು ಸರ್ಕಾರಕ್ಕೆ ಶಿಫಾರಸು ಮಾಡುವಂತೆ ಒತ್ತಾಯಿಸಿ, ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ದೇವದುರ್ಗ ತಾಲೂಕು ಘಟಕ ಹಾಗೂ ಜಾಲಹಳ್ಳಿ ಸಾರ್ವಜನಿಕರ ಪರವಾಗಿ ದೇವದುರ್ಗ ಕ್ಷೇತ್ರದ ಶಾಸಕಿ ಶ್ರೀಮತಿ ಕರೇಮ್ಮ ಜಿ. ನಾಯಕ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಜಾಲಹಳ್ಳಿ ಪಟ್ಟಣವು ದಿನದಿಂದ ದಿನಕ್ಕೆ ವೇಗವಾಗಿ ಅಭಿವೃದ್ಧಿಯಾಗುತ್ತಿದ್ದು, ಜನಸಂಖ್ಯೆ ಹಾಗೂ ವಾಣಿಜ್ಯ ಚಟುವಟಿಕೆಗಳು ನಿರಂತರವಾಗಿ ಹೆಚ್ಚಾಗುತ್ತಿವೆ. ಸುಮಾರು 20,000ರಿಂದ 25,000 ಜನಸಂಖ್ಯೆ ಹೊಂದಿರುವ ಜಾಲಹಳ್ಳಿ ಗ್ರಾಮ ಪಂಚಾಯಿತಿಯು ರಾಜ್ಯದಲ್ಲೇ ಅತಿ ಹೆಚ್ಚು,



ಅಂದರೆ 33 ಸದಸ್ಯರನ್ನು ಹೊಂದಿರುವ ಗ್ರಾಮ ಪಂಚಾಯಿತಿ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಆದರೆ ಪ್ರಸ್ತುತ ಗ್ರಾಮ ಪಂಚಾಯಿತಿಗೆ ಲಭ್ಯವಾಗುತ್ತಿರುವ ಅನುದಾನ ಹಾಗೂ ಆಡಳಿತ ವ್ಯವಸ್ಥೆಯು ಪಟ್ಟಣದ ಹೆಚ್ಚುತ್ತಿರುವ ಅಗತ್ಯಗಳಿಗೆ ಸಮರ್ಪಕವಾಗಿ ಸ್ಪಂದಿಸಲು ಸಾಧ್ಯವಾಗುತ್ತಿಲ್ಲ ಎಂದು ಮನವಿಯಲ್ಲಿ ತಿಳಿಸಲಾಗಿದೆ.ರಸ್ತೆಗಳು, ಚರಂಡಿ ವ್ಯವಸ್ಥೆ, ಕುಡಿಯುವ ನೀರು, ಬೀದಿ ದೀಪಗಳು, ನೈರ್ಮಲ್ಯ, ಸಾರ್ವಜನಿಕ ಆರೋಗ್ಯ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಸಮರ್ಪಕವಾಗಿ ಕಲ್ಪಿಸಲು ಜಾಲಹಳ್ಳಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಕರವೇ ಮುಖಂಡರು ಹಾಗೂ ಸಾರ್ವಜನಿಕರು ಒತ್ತಾಯಿಸಿದರು.ಈ ಹಿಂದೆ ಜಾಲಹಳ್ಳಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸುವ ಪ್ರಕ್ರಿಯೆ ನಡೆದಿದ್ದರೂ, ನ್ಯಾಯಾಲಯದ ಮೊರೆ ಹೋಗಿದ್ದ ಹಿನ್ನೆಲೆಯಲ್ಲಿ ಪ್ರಕ್ರಿಯೆ ಬಾಕಿ ಉಳಿದಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.ಆದ್ದರಿಂದ ಶಾಸಕರು ಈ ವಿಷಯವನ್ನು ಕರ್ನಾಟಕ ವಿಧಾನಸಭೆಯ ಅಧಿವೇಶನದಲ್ಲಿ ಪ್ರಸ್ತಾಪಿಸಿ ಸರ್ಕಾರದ ಗಮನಕ್ಕೆ ತರಬೇಕು. ಅಲ್ಲದೆ, ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣವನ್ನು ಕಾನೂನುಬದ್ಧವಾಗಿ ಇತ್ಯರ್ಥಗೊಳಿಸಿ, ಜಾಲಹಳ್ಳಿಯನ್ನು ಪುರಸಭೆಯಾಗಿ ಘೋಷಿಸುವ ಪ್ರಕ್ರಿಯೆಯನ್ನು ಮುಂದುವರಿಸಲು ಸಂಬಂಧಪಟ್ಟ ಇಲಾಖೆಗೆ ಅಗತ್ಯ ನಿರ್ದೇಶನ ನೀಡುವಂತೆ ಸರ್ಕಾರವನ್ನು ಒತ್ತಾಯಿಸಬೇಕೆಂದು ಮನವಿಯಲ್ಲಿ ಕೋರಲಾಗಿದೆ.ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಅಧ್ಯಕ್ಷ ನಂದಪ್ಪ ಪಿ. ಮಡ್ಡಿ, ಪ್ರಧಾನ ಕಾರ್ಯದರ್ಶಿ ಗುರುನಾಥ್ ರೆಡ್ಡಿ ಎಂ., ತಾಲೂಕು ಸಂಚಾಲಕ ಭೀಮಣ್ಣ ನಾಯಕ, ಕಾನೂನು ಸಲಹೆಗಾರ ನಂದಪ್ಪ ಎಸ್., ವಿಕಲಚೇತನ ಜಿ.ಎಚ್.ಓ. ಅಧ್ಯಕ್ಷ ಭೀಮರಾಯ ಎಂ. ನಾಯಕ, ಶಾಂತಪ್ಪ ಬಳೆ ಸಾಹು, ಜಾಲಹಳ್ಳಿ ಹೋಬಳಿ ಘಟಕದ ಅಧ್ಯಕ್ಷ ತಮ್ಮಣ್ಣ ಹೆರುಂಡಿ, ಯುವ ಘಟಕದ ಅಧ್ಯಕ್ಷ ಮಲ್ಲು ತೆಗ್ಗಳ್ಳಿ, ಹೋಬಳಿ ಉಪಾಧ್ಯಕ್ಷ ಅಮರೇಶ ಪಾಟೀಲ, ಗ್ರಾಮ ಘಟಕದ ಉಪಾಧ್ಯಕ್ಷ ವೆಂಕಟೇಶ ಜಗರಕಲ್, ಶಿವು ಯರಗುಡ್ಡ, ಮಲ್ಲಿಕಾರ್ಜುನ ಹಡಪದ್, ಮಲ್ಲು ಹ ಡಪದ್, ಖಾಜಾ ಹುಸೇನ್ ಆರ್ತಿ , ಹೈದರ್ ಸಾಬ್ ಮುಲ್ಲಾ, ಬಾಳಪ್ಪ ಭಾವಿಮನಿ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಗ್ರಾಮದ ಸಾರ್ವಜನಿಕರು ಉಪಸ್ಥಿತರಿದ್ದರು.
ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

ಅಂಧಮಕ್ಕಳೊಂದಿಗೆ ಬಾಬುಗೌಡ ಬಾದರ್ಲಿ ಹುಟ್ಟುಹಬ್ಬ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ಅಫಜಲಪುರ: ಸಿಂಧನೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಾನ್ಯ ಶ್ರೀ ಬಾಬುಗೌಡ ಬಾದರ್ಲಿ ಅವರ ಹುಟ್ಟುಹಬ್ಬವನ್ನು ಅಲ್ತಾಫ್ ಪಟೇಲ್ ಗೆಳೆಯರ ಬಳಗದ ವತಿಯಿಂದ ಅರ್ಥಪೂರ್ಣ ಹಾಗೂ ಮಾನವೀಯ ಸೇವೆಯ ಮೂಲಕ ಆಚರಿಸಲಾಯಿತು. ಅಫಜಲಪುರದಲ್ಲಿರುವ ಅಂಧಮಕ್ಕಳ ಆಶ್ರಮಕ್ಕೆ ಭೇಟಿ ನೀಡಿದ ಅಲ್ತಾಫ್ ಪಟೇಲ್ ಗೆಳೆಯರ ಬಳಗದ ಸದಸ್ಯರು, ಅಲ್ಲಿನ ಮಕ್ಕಳೊಂದಿಗೆ ಆತ್ಮೀಯವಾಗಿ ಬೆರೆತು ಬಾಬುಗೌಡ ಬಾದರ್ಲಿ



ಅವರ ಹುಟ್ಟುಹಬ್ಬವನ್ನು ಆಚರಿಸಿದರು. ಕೇಕ್ ಕತ್ತರಿಸುವ ಮೂಲಕ ಮಕ್ಕಳೊಂದಿಗೆ ಸಂಭ್ರಮ ಹಂಚಿಕೊಂಡು, ಅವರೊಂದಿಗೆ ಕೆಲಕಾಲ ಸಂತಸದಿಂದ ಕಾಲ ಕಳೆದರು.ಈ ಸಂದರ್ಭದಲ್ಲಿ ಆಶ್ರಮದ ಮಕ್ಕಳಿಗೆ ಹೊದಿಕೆಗಳನ್ನು ಹಾಗೂ ಉಪಾಹಾರವನ್ನು ವಿತರಿಸಲಾಯಿತು. ಮಕ್ಕಳ ಅಗತ್ಯತೆಗಳನ್ನು ಅರಿತು ಅವರಿಗೆ ನೆರವಾಗುವ ಮೂಲಕ ಹುಟ್ಟುಹಬ್ಬದ ಆಚರಣೆಗೆ ಸಾಮಾಜಿಕ ಕಾಳಜಿಯ ಸ್ಪರ್ಶ ನೀಡಲಾಯಿತು. ಮಕ್ಕಳ ಮುಖದಲ್ಲಿ ಸಂತಸ ಮೂಡಿಸುವ ಮೂಲಕ ಅವರೊಂದಿಗೆ ಸಂತೋಷ ಹಂಚಿಕೊಂಡಿದ್ದು, ಕಾರ್ಯಕ್ರಮವು ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. ಹುಟ್ಟುಹಬ್ಬದಂತಹ ವೈಯಕ್ತಿಕ ಸಂಭ್ರಮವನ್ನು ಅದ್ದೂರಿಯಾಗಿ ಆಚರಿಸುವ ಬದಲು, ಸಮಾಜದ ಅಸಹಾಯಕರೊಂದಿಗೆ ಸಂತಸ ಹಂಚಿಕೊಂಡು, ಅಗತ್ಯ ವಸ್ತುಗಳನ್ನು ವಿತರಿಸುವ ಮೂಲಕ ಆಚರಿಸಿರುವುದು ಮಾನವೀಯ ಮೌಲ್ಯಗಳಿಗೆ ಮಾದರಿಯಾಗಿದೆ ಎಂದು ಕಾರ್ಯಕ್ರಮದಲ್ಲಿ ಭಾಗವಹಿಸಿದವರು ಅಭಿಪ್ರಾಯಪಟ್ಟರು.ಸೇವೆಯೇ ಸಂಭ್ರಮ, ಮಾನವೀಯತೆಯೇ ನಿಜವಾದ ಸಂತೋಷ ಎಂಬ ಸಂದೇಶ ಸಾರುವಂತೆ ನಡೆದ ಈ ಕಾರ್ಯಕ್ರಮದಲ್ಲಿ ಅಂಧಮಕ್ಕಳ ಆಶ್ರಮದ ಮಕ್ಕಳು ಹಾಗೂ ಅಲ್ತಾಫ್ ಪಟೇಲ್ ಗೆಳೆಯರ ಬಳಗದ ಸದಸ್ಯರು ಉಪಸ್ಥಿತರಿದ್ದರು.

ರೈತರ ಹಿತ ಕಾಯಲು ಸರ್ಕಾರ ಬದ್ಧವಾಗಿದೆ:ಡಾ.ಪ್ರಭುಗೌಡ

❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಈ ಬಾರಿ ಹಿಂದೆಂದೂ ಕಾಣದಂತಹ ಭೀಕರ ಬರಗಾಲ ಆವರಿಸಿದೆ, ನಮ್ಮ ರೈತರು ಸಂಕಷ್ಟದಲ್ಲಿದ್ದಾರೆ ಆದರೆ ಸರ್ಕಾರ ಶೀಘ್ರದಲ್ಲಿಯೇ ಸಂಪೂರ್ಣ ಬರ ಘೋಷಣೆ ಮಾಡಿ ರೈತರ ನೆರವಿಗೆ ಧಾವಿಸಲಿದೆ ಆತಂಕ ಪಡುವ ಅಗತ್ಯವಿಲ್ಲ ಎಂದು ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ಪ್ರಭುಗೌಡ ಲಿಂಗದಳ್ಳಿ ಹೇಳಿದರು. ಭಾನುವಾರ ಪಟ್ಟಣದ ಪ್ರವಾಸಿ ಮಂದಿರ ಹತ್ತಿರ ಕಳೆದ 11 ದಿನಗಳಿಂದ ಬರಗಾಲ ಘೋಷಣೆಗಾಗಿ ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ನಡೆಯುತ್ತಿರುವ ಧರಣಿ ಸ್ಥಳಕ್ಕೆ ಭೇಟಿ ನೀಡಿ, ತಮ್ಮ ಬೆಂಬಲವನ್ನು ಸೂಚಿಸಿ ಅವರು ಮಾತನಾಡಿದರು. ಈಗಾಗಲೇ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಅವರು



ರೈತರಿಗಾಗಿ ಕೆಲವು ಹೊಸ ಯೋಜನೆ ಗಳನೆಗಳನ್ನು ಜಾರಿಗೆ ತರಲು ಸಿದ್ಧತೆ ಮಾಡಿಕೊಂಡಿದ್ದಾರೆ, ಅವರೊಬ್ಬ ಜನಪರ ಹಾಗೂ ರೈತಪರ ಕಾಳಜಿ ಹೊಂದಿದ ನಾಯಕರಾಗಿದ್ದು ರೈತರ ಸಮಸ್ಯೆಗಳ ಕುರಿತು ಅವರಿಗೆ ಅಪಾರ ಕಾಳಜಿ ಇದೆ, ಈ ಮಾಸದ 16 ಅಥವಾ 17ರಂದು ಖಂಡಿತವಾಗಿಯೂ ಅವರು ಮೂರನೇ ಹಂತದ ಬರಘೋಷಿತ ಪಟ್ಟಿಯನ್ನು ಪ್ರಕಟ ಮಾಡಲಿದ್ದು ಅದರಲ್ಲಿ ನಮ್ಮ ಜಿಲ್ಲೆಯ ಎಲ್ಲಾ ತಾಲೂಕುಗಳು ಒಳಗೊಂಡಿರುತ್ತವೆ. ಒಂದು ಪಕ್ಷ ಹೀಗಾಗದೆ ಹೋದಲ್ಲಿ ನಾನು ಸಹ ನಿಮ್ಮೊಂದಿಗೆ ಸೇರಿ ಹೋರಾಟವನ್ನು ಮಾಡುತ್ತೇನೆ. ಏಕೆಂದರೆ ಇದು ರೈತರ ಹೋರಾಟ,ರೈತರ ವಿಚಾರದಲ್ಲಿ ಪಕ್ಷಭೇದ ಮರೆತು ಎಲ್ಲರೂ ಒಗ್ಗೂಡಬೇಕು. ಈ ಗಂಭೀರ ಸಮಸ್ಯೆ ಕುರಿತು ಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲರೊಂದಿಗೆ ಮಾತನಾಡಿ ಸರ್ಕಾರದ ಮೇಲೆ ಒತ್ತಡ ತರಲು ನಾನು ಸಹ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದರು. ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಹಾಗೂ ತಾಪಂ ಮಾಜಿ ಸದಸ್ಯ ಪ್ರಭುಗೌಡ ಬಿರಾದಾರ(ಅಸ್ಕಿ) ಮಾತನಾಡಿದರು. 11ನೇ ದಿನದ ಹೋರಾಟದಲ್ಲಿ ಅಂಬೇಡ್ಕರ್ ಸೇನೆ ಜಿಲ್ಲಾ ಉಪಾಧ್ಯಕ್ಷ ಬಸ್ಸು ಮಾದರ, ತಾಲೂಕ ಅಧ್ಯಕ್ಷ ಗೋಪಾಲ ಕಟ್ಟಿಮನಿ, ಅಖಂಡ ಕರ್ನಾಟಕ ರೈತ ಸಂಘದ ಜಿಲ್ಲಾ ಅಧ್ಯಕ್ಷ ಪಾಂಡು ಪ್ಯಾಟಿ,ತಾಳಿಕೋಟಿ ತಾಲೂಕ ಅಧ್ಯಕ್ಷ ಬಾಳಪ್ಪಗೌಡ ಲಿಂಗದಳ್ಳಿ, ಉಪಾಧ್ಯಕ್ಷ ರಾಮನಗೌಡ ಹಾದಿಮನಿ, ಅಂಬೇಡ್ಕರ್ ಸೇನೆ ಪದಾಧಿಕಾರಿಗಳಾದ ಬಸವರಾಜ ಮಾದರ, ಪರಶುರಾಮ ತಳವಾರ, ಕಾಶಿನಾಥ್ ಕಟ್ಟಿಮನಿ, ಶಂಕರ ಸಾಸನೂರ, ಮಲ್ಲಪ್ಪ ಶಿರೋಳ, ಮಹೆಬೂಬ ಅವಟಿ, ಹಾಗೂ ವಿವಿಧ ಗ್ರಾಮಗಳಿಂದ ಆಗಮಿಸಿದ ರೈತರು ಉಪಸ್ಥಿತರಿದ್ದರು.

ಮುಸ್ಲಿಂ ಸಮುದಾಯದ ಕೊಡುಗೆ, ಜನಸಂಖ್ಯೆಗೆ ತಕ್ಕ ರಾಜಕೀಯ ಪ್ರಾತಿನಿಧ್ಯ ನೀಡಲಿ
ಕಾಂಗ್ರೆಸ್ ಪಕ್ಷದಲ್ಲಿ ದಶಕಗಳಿಂದ ನಿಷ್ಠೆಯಿಂದ ದುಡಿದರೂ ಸೂಕ್ತ ಸ್ಥಾನಮಾನ ಸಿಗುತ್ತಿಲ್ಲ: ಅಂಜುಮನ್–ಎ–ಮುಸ್ಲಿಮೀನ್ ಅಸಮಾಧಾನ

❑ ನೈಜ್ಯ ದೆಸೆ ನ್ಯೂಸ್

ಲಿಂಗಸುಗೂರು:ಲಿಂಗಸುಗೂರು ತಾಲೂಕಿನ ಮುಸ್ಲಿಂ ಸಮುದಾಯವು ಹಲವು ದಶಕಗಳಿಂದ ಕಾಂಗ್ರೆಸ್ ಪಕ್ಷದ ಸಂಘಟನೆ ಹಾಗೂ ಸಾರ್ವಜನಿಕ ಬದುಕಿನಲ್ಲಿ ನಿಷ್ಠೆಯಿಂದ ದುಡಿಯುತ್ತಾ ಬಂದಿದ್ದು, ಪಕ್ಷದ ಬೆಳವಣಿಗೆಗೆ ತನ್ನದೇ ಆದ ಕೊಡುಗೆ ನೀಡಿದೆ. ಆದರೆ ಸಮುದಾಯದ ಜನಸಂಖ್ಯೆ, ಪಕ್ಷ ಸಂಘಟನೆಗೆ ನೀಡಿರುವ ಕೊಡುಗೆ ಹಾಗೂ ಅರ್ಹತೆಗೆ ಅನುಗುಣವಾಗಿ ಪಕ್ಷದ ಹುದ್ದೆಗಳು, ನಿಗಮ–ಮಂಡಳಿಗಳು, ವಿವಿಧ ಪ್ರಾಧಿಕಾರಗಳು ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಸೂಕ್ತ ಪ್ರಾತಿನಿಧ್ಯ ಇನ್ನೂ ದೊರೆಯುತ್ತಿಲ್ಲ ಎಂದು ಅಂಜುಮನ್–ಎ–ಮುಸ್ಲಿಮೀನ್ ಲಿಂಗಸುಗೂರು ತಾಲೂಕು ಸಮಿತಿ (ಆರ್) ಅಸಮಾಧಾನ ವ್ಯಕ್ತಪಡಿಸಿದೆ.ಸೆ.13ರಂದು ಲಿಂಗಸುಗೂರಿನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಸಮಿತಿಯ ಪದಾಧಿಕಾರಿಗಳು ಮಾತನಾಡಿ, ತಾಲೂಕಿನ ಗ್ರಾಮೀಣ ಹಾಗೂ ಪಟ್ಟಣ ಪ್ರದೇಶಗಳನ್ನು ಒಳಗೊಂಡಂತೆ ಸುಮಾರು 65 ಸಾವಿರಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ



ಮುಸ್ಲಿಂ ಸಮುದಾಯ ಹಲವು ವರ್ಷಗಳಿಂದ ಕಾಂಗ್ರೆಸ್ ಪಕ್ಷದೊಂದಿಗೆ ಗುರುತಿಸಿಕೊಂಡು ಪಕ್ಷದ ಸಂಘಟನೆ ಬಲಪಡಿಸುವಲ್ಲಿ ನಿರಂತರವಾಗಿ ಶ್ರಮಿಸುತ್ತಿದೆ. ಚುನಾವಣಾ ಸಂದರ್ಭದಲ್ಲಿ ಪಕ್ಷದ ಅಭ್ಯರ್ಥಿಗಳ ಪರವಾಗಿ ಪ್ರಾಮಾಣಿಕವಾಗಿ ಕೆಲಸ ಮಾಡುವುದು ಸೇರಿದಂತೆ ಸಾರ್ವಜನಿಕ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿಯೂ ಸಮುದಾಯದ ಮುಖಂಡರು ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ ಎಂದು ತಿಳಿಸಿದರು.ಆದರೆ ಪಕ್ಷದ ಸಂಘಟನೆ ಹಾಗೂ ಅಧಿಕಾರದ ಹಂಚಿಕೆಯಲ್ಲಿ ಸಮುದಾಯಕ್ಕೆ ದೊರೆಯಬೇಕಾದ ಸೂಕ್ತ ಅವಕಾಶಗಳು ಸಿಗದಿರುವುದು ಸಮುದಾಯದ ಮುಖಂಡರು ಹಾಗೂ ಕಾರ್ಯಕರ್ತರಲ್ಲಿ ಅಸಮಾಧಾನ ಮೂಡಿಸಿದೆ. ಬೆಂಬಲ ನೀಡುವ ಸಂದರ್ಭದಲ್ಲಿ ಮಾತ್ರ ಸಮುದಾಯದ ಕೊಡುಗೆಯನ್ನು ಗುರುತಿಸಿ, ಅಧಿಕಾರ ಹಾಗೂ ಜವಾಬ್ದಾರಿಯ ಸ್ಥಾನಮಾನ ನೀಡುವ ಸಂದರ್ಭದಲ್ಲಿ ಕಡೆಗಣಿಸುವುದು ಎಷ್ಟು ನ್ಯಾಯ? ಎಂದು ಪ್ರಶ್ನಿಸಿದರು.ತಾಲೂಕಿನ ವಿವಿಧ ಗ್ರಾಮಗಳು ಹಾಗೂ ಪಟ್ಟಣ ಪ್ರದೇಶಗಳಲ್ಲಿ ಮುಸ್ಲಿಂ ಸಮುದಾಯದ ಜನರು ಶಿಕ್ಷಣ, ವ್ಯಾಪಾರ, ಉದ್ಯೋಗ, ಕೃಷಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ತಮ್ಮದೇ ಆದ ಕೊಡುಗೆ ನೀಡುತ್ತಿದ್ದಾರೆ. ಸಮಾಜದ ಅಭಿವೃದ್ಧಿ ಹಾಗೂ ಶಾಂತಿ, ಸೌಹಾರ್ದತೆ ಕಾಪಾಡುವ ನಿಟ್ಟಿನಲ್ಲಿ ಸಮುದಾಯ ಸದಾ ಮುಂಚೂಣಿಯಲ್ಲಿದೆ. ಇಂತಹ ಸಮುದಾಯಕ್ಕೆ ಸ್ಥಳೀಯ ಹಾಗೂ ಜಿಲ್ಲಾ ಮಟ್ಟದ ವಿವಿಧ ಸಮಿತಿಗಳು, ನಿಗಮ–ಮಂಡಳಿಗಳು, ಪ್ರಾಧಿಕಾರಗಳು ಹಾಗೂ ಪಕ್ಷದ ಸಂಘಟನೆಯಲ್ಲಿ ಸಮರ್ಪಕ ಅವಕಾಶ ನೀಡುವುದು ಅಗತ್ಯವಾಗಿದೆ ಎಂದು ಆಗ್ರಹಿಸಿದರು ಸೌಹಾರ್ದತೆಗೆ ಮಾದರಿಯಾಗಲಿ ಲಿಂಗಸುಗೂರು ಪತ್ರಿಕಾಗೋಷ್ಠಿ ಆರಂಭಕ್ಕೂ ಮುನ್ನ ಅಂಜುಮನ್–ಎ–ಮುಸ್ಲಿಮೀನ್ ಲಿಂಗಸುಗೂರು ತಾಲೂಕು ಸಮಿತಿಯ ವತಿಯಿಂದ ನಾಡಿನ ಸಮಸ್ತ ಹಿಂದೂ ಬಾಂಧವರಿಗೆ ಗಣೇಶ ಚತುರ್ಥಿಯ ಹಾರ್ದಿಕ ಶುಭಾಶಯಗಳನ್ನು ಸಲ್ಲಿಸಲಾಯಿತು.ಹಬ್ಬಗಳು ಬೇರೆ ಇರಬಹುದು, ಆದರೆ ನಮ್ಮ ಹೃದಯಗಳು ಒಂದಾಗಿರಬೇಕು. ಸಮಾಜದಲ್ಲಿ ಸೌಹಾರ್ದತೆ, ಸಹೋದರತ್ವ ಹಾಗೂ ಪರಸ್ಪರ ಗೌರವ ಸದಾ ಉಳಿಯಬೇಕು. ಗಣೇಶ ಚತುರ್ಥಿಯ ಈ ಶುಭ ಸಂದರ್ಭದಲ್ಲಿ ನಾಡಿನ ಸಮಸ್ತ ಜನತೆಗೆ ಆರೋಗ್ಯ, ಆಯುಷ್ಯ, ಶಾಂತಿ, ನೆಮ್ಮದಿ ಹಾಗೂ ಸಮೃದ್ಧಿ ದೊರೆಯಲಿ ಎಂದು ಹಾರೈಸಿದರು."ಧರ್ಮಗಳು ಬೇರೆ ಇರಬಹುದು, ಹಬ್ಬಗಳು ಬೇರೆ ಇರಬಹುದು; ಆದರೆ ನಾವೆಲ್ಲರೂ ಒಂದೇ ನಾಡಿನ ಜನರು. ಪರಸ್ಪರ ಪ್ರೀತಿ, ವಿಶ್ವಾಸ ಮತ್ತು ಸಹೋದರತ್ವದೊಂದಿಗೆ ಬದುಕುವುದು ನಮ್ಮೆಲ್ಲರ ಜವಾಬ್ದಾರಿ" ಎಂದು ಸಮಿತಿ ಮುಖಂಡರು ಹೇಳಿದರು.ಅರ್ಹತೆಗೆ ತಕ್ಕ ಅವಕಾಶ ನೀಡಲಿ ಮುಸ್ಲಿಂ ಸಮುದಾಯವನ್ನು ಕೇವಲ ಮತಬ್ಯಾಂಕ್ ದೃಷ್ಟಿಯಿಂದ ನೋಡದೆ, ಸಮಾಜದ ಒಂದು ಪ್ರಮುಖ ಭಾಗವಾಗಿ ಪರಿಗಣಿಸಿ ಅದರ ಅರ್ಹತೆ ಮತ್ತು ಕೊಡುಗೆಗೆ ತಕ್ಕಂತೆ ಅವಕಾಶಗಳನ್ನು ನೀಡಬೇಕು. ಪಕ್ಷದ ಸಂಘಟನೆಯಲ್ಲಿ ಯುವಕರು ಹಾಗೂ ಅರ್ಹ ಮುಖಂಡರಿಗೆ ಹೆಚ್ಚಿನ ಜವಾಬ್ದಾರಿಗಳನ್ನು ನೀಡುವುದರ ಜತೆಗೆ ವಿವಿಧ ನಿಗಮ–ಮಂಡಳಿಗಳು, ಪ್ರಾಧಿಕಾರಗಳು ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಸಮುದಾಯಕ್ಕೆ ಸೂಕ್ತ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ಸಮಿತಿ ಒತ್ತಾಯಿಸಿತು. ಕಾಂಗ್ರೆಸ್ ಪಕ್ಷವು ಸಾಮಾಜಿಕ ನ್ಯಾಯ, ಸಮಾನ ಅವಕಾಶ ಹಾಗೂ ಎಲ್ಲ ವರ್ಗಗಳಿಗೂ ಪ್ರಾತಿನಿಧ್ಯ ನೀಡುವ ತತ್ವವನ್ನು ಪ್ರತಿಪಾದಿಸುತ್ತಿದೆ. ಹೀಗಾಗಿ ಲಿಂಗಸುಗೂರು ತಾಲೂಕಿನಲ್ಲಿಯೂ ಅದೇ ತತ್ವದಡಿ ಮುಸ್ಲಿಂ ಸಮುದಾಯಕ್ಕೆ ನ್ಯಾಯಯುತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸುವ ಮೂಲಕ ಸಮುದಾಯದ ವಿಶ್ವಾಸವನ್ನು ಮತ್ತಷ್ಟು ಗಟ್ಟಿಗೊಳಿಸಬೇಕು ಎಂದು ಮನವಿ ಮಾಡಿದರು."ನಮ್ಮ ಬೇಡಿಕೆ ಯಾವುದೇ ಸಮುದಾಯದ ವಿರುದ್ಧವಲ್ಲ. ಎಲ್ಲ ಸಮುದಾಯಗಳಿಗೂ ಸಮಾನ ಅವಕಾಶ ಸಿಗಬೇಕು ಎಂಬುದು ನಮ್ಮ ಆಶಯ. ನಮ್ಮ ಸಮುದಾಯದ ಜನಸಂಖ್ಯೆ, ಅರ್ಹತೆ ಹಾಗೂ ಪಕ್ಷಕ್ಕಾಗಿ ಮಾಡಿದ ಸೇವೆಯನ್ನು ಪರಿಗಣಿಸಿ ಸೂಕ್ತ ಸ್ಥಾನಮಾನ ನೀಡಬೇಕು" ಎಂದು ಅಂಜುಮನ್–ಎ–ಮುಸ್ಲಿಮೀನ್ ತಾಲೂಕು ಸಮಿತಿ ಮನವಿ ಮಾಡಿದೆ.ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಹೋದರತ್ವವನ್ನು ಕಾಪಾಡಿಕೊಂಡು, ಎಲ್ಲಾ ಸಮುದಾಯಗಳಿಗೂ ಸಮಾನ ಗೌರವ ಮತ್ತು ಅವಕಾಶ ದೊರೆಯುವಂತಹ ವಾತಾವರಣ ನಿರ್ಮಾಣವಾಗಬೇಕು. ಲಿಂಗಸುಗೂರು ತಾಲೂಕು ಸೌಹಾರ್ದತೆ ಮತ್ತು ಸಹಬಾಳ್ವೆಗೆ ಮಾದರಿಯಾಗಬೇಕು ಎಂದು ಸಮಿತಿ ಆಶಯ ವ್ಯಕ್ತಪಡಿಸಿತು.

ವಚನ ದರ್ಶನ

ಎನ್ನ ಕಾಯವ ದಂಡಿಗೆಯ ಮಾಡಯ್ಯಾ ಎನ್ನ ಶಿರವ ಸೋರೆಯ ಮಾಡಯ್ಯಾ ಎನ್ನ ನರವ ತಂತಿಯ ಮಾಡಯ್ಯಾ, ಎನ್ನ ಬೆರಳ ಕಡ್ಡಿಯ ಮಾಡಯ್ಯಾ ಬತ್ತೀಸ ರಾಗವ ಹಾಡಯ್ಯಾ, ಉರದಲೊತ್ತಿ ಬಾರಿಸು,ಕೂಡಲಸಂಗಮದೇವಾ

12 ನೇ ಶತಮಾನದ ಶರಣರಾದ ವಿಶ್ವಗುರು ಬಸವಣ್ಣನವರ ಅತ್ಯಂತ ಪ್ರಸಿದ್ಧವಾದ ಹಾಗೂ ಸುಂದರವಾದ ವಚನವಾಗಿದೆ. ಈ ವಚನದಲ್ಲಿ ವಿಶ್ವಗುರು ಬಸವಣ್ಣನವರು ತಮ್ಮ ಸಂಪೂರ್ಣ ದೇಹವನ್ನು ದೇವರ ಸೇವೆಗೆ ಅರ್ಪಿಸಿಕೊಳ್ಳುವಂತೆ ಮತ್ತು ದೇವನೇ ಅದನ್ನು ನುಡಿಸುವಂತೆ ಬೇಡಿಕೊಂಡಿದ್ದಾರೆ.ಈ ವಚನದಲ್ಲಿ ಬಸವಣ್ಣನವರು ತಮ್ಮನ್ನು ತಾವು ದೇವರ ಕೈಯಲ್ಲಿರುವ 'ದಂಡಿಗೆ' ಇಂದಿನ ವೀಣೆಯಂತಹ ಒಂದು ತಂತಿ ವಾದ್ಯ ಮಾಡಲು ಕೇಳಿಕೊಳ್ಳುತ್ತಿದ್ದಾರೆ.ದೇಹ ಮತ್ತು ಶಿರ ನನ್ನ ದೇಹವನ್ನು ವಾದ್ಯದ ದಂಡವನ್ನಾಗಿಯೂ, ನನ್ನ ತಲೆಯನ್ನು ವಾದ್ಯಕ್ಕೆ ಬಳಸುವ ಒಣ-ಗಿದ ಸೋರೆಕಾಯಿಯ ಬುರುಡೆಯನ್ನಾಗಿಯೂ ಮಾಡು.ನರ ಮತ್ತು ಬೆರಳು: ನನ್ನ ದೇಹದ ನರಗಳನ್ನು ಆ ವಾದ್ಯದ ತಂತಿಗಳನ್ನಾಗಿ ಮಾಡು ಮತ್ತು ನನ್ನ ಬೆರಳುಗಳನ್ನೇ ಅದನ್ನು ನುಡಿಸುವ ಕಡ್ಡಿಯನ್ನಾಗಿ ಪರಿವರ್ತಿಸು.ಸಂಗೀತದ ನಾದ: ಹೇ ಕೂಡಲಸಂಗಮದೇವ, ನನ್ನನ್ನು ನಿನ್ನ ಎದೆಗೆ ಒತ್ತಿ ಹಿಡಿದು, ನಿನಗೆ ಇಷ್ಟ ಬಂದಂತೆ ಮೂವತ್ತೆರಡು ಬತ್ತೀಸ ರಾಗಗಳನ್ನು ಮಂಜುಳವಾಗಿ ನುಡಿಸು. ನನ್ನ ಜೀವನದ ಪ್ರತಿ ಕ್ಷಣವೂ ನಿನ್ನ ನಾದಮಯವಾಗಿರಲಿ ಎಂಬುದು ಇದರ ಆಶಯವಾಗಿದೆ.ಅಂದರೆ, "ನನ್ನಲ್ಲಿ ಯಾವುದೇ ಅಹಂಕಾರ ಉಳಿಯಬಾರದು, ನಾನು ಸಂಪೂರ್ಣವಾಗಿ ನಿನ್ನ ಇಚ್ಛೆಯಂತೆ ನಡೆಯುವ ನಿಮಿತ್ತ ಮಾತ್ರನಾಗಬೇಕು" ಎಂಬ ಪರಮ ಭಕ್ತಿಯ ಶರಣಾಗತಿಯ ಭಾವ ಇಲ್ಲಿದೆ. ಇಂಥಹ ವಚನಗಳು ಮನುಕುಲಕ್ಕೆ ದಾರಿದೀಪವಾಗಿವೆ. ನಾವು ನೀವು ವಚನದ ದಾರಿಯಲ್ಲಿ ಸಾಗೋಣ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

ಹಣದ ಗಲಾಟೆ: ಕುರುಗೋಡು ನರ್ಸರಿ ಮಾಲೀಕನ ಭೀಕರ ಕೊಲೆ ಪ್ರಕರಣದ ಇಬ್ಬರು ಆರೋಪಿಗಳ ಬಂಧನ

ನೈಜ್ಯ ದೆಸೆ ನ್ಯೂಸ್



ಬಳ್ಳಾರಿ / ಕುರುಗೋಡು: ಸೆಪ್ಟೆಂಬರ್ 6 ರಂದು ಬಳ್ಳಾರಿ ಜಿಲ್ಲೆಯ ಕುರುಗೋಡು ಪೊಲೀಸ್ ಠಾಣಾ ವ್ಯಾಪ್ತಿಯ ಯಲ್ಲಾಪುರ ಕ್ರಾಸ್ ಬಳಿ ನಡೆದಿದ್ದ ನರ್ಸರಿ ಮಾಲೀಕ ಎನ್. ಉಮಾಶಂಕರ್ (38) ಅವರ ಕೊಲೆ ಪ್ರಕರಣವನ್ನು ಭೇದಿಸುವಲ್ಲಿ ಕುರುಗೋಡು ಪೊಲೀಸರು ಯಶಸ್ವಿಯಾಗಿದ್ದಾರೆ. ಪ್ರಕರಣ-ಕ್ಕೆ ಸಂಬಂಧಿಸಿದಂತೆ ಇಬ್ಬರು ಆರೋಪಿಗಳನ್ನು ಬಂಧಿಸಲಾಗಿದ್ದು, ಮುಖ್ಯ ಆರೋಪಿಗಾಗಿ ತೀವ್ರ ಹುಡುಕಾಟ ಮುಂದುವರಿದಿದೆ. ಬಂಧಿತರು ಯಾರು?ಕೊಲೆ ಕೃತ್ಯಕ್ಕೆ ಸಹಕ-ರಿಸಿದ ಕುರುಗೋಡಿನ ಯಲ್ಲಾಪುರ ಕ್ರಾಸ್ ನಿವಾಸಿಗಳಾದ ಅಂಡಿ ಜೋಗಿ ಹನುಮಂತಪ್ಪ (30) ಹಾಗೂ ಬಣಗಾರ ಮಂಜುನಾಥ (26) ಬಂಧಿತ ಆರೋಪಿಗಳಾಗಿದ್ದು, ಇವರನ್ನು ಸದ್ಯ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಆಂಧ್ರಪ್ರದೇಶದ ಕಡಪ ಜಿಲ್ಲೆಯ ಮುಖ್ಯ ಆರೋಪಿ ಪೋಲೇಪಲ್ಲಿ ಅರುಣ್ ಕುಮಾರ್ (25) ಸದ್ಯ ತಲೆಮರೆಸಿಕೊಂಡಿದ್ದಾನೆ.ಬಂಧಿತ-ರಿಂದ ಪೊಲೀಸರು ಕೊಲೆಗೆ ಬಳಸಿದ 1 ಮಾರಕಾಸ್ತ್ರ, 4 ಮೋಟಾರ್ ಸೈಕಲ್‌ಗಳು, 1 ಕಾರು ಹಾಗೂ5 ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ಉಮಾಶಂಕರ್ ಹಾಗೂ ಮುಖ್ಯ ಆರೋಪಿ ಅರುಣ್ ಕುಮಾರ್ ನಡುವೆ ಕೋಕೋಪಿಟ್ (ನರ್ಸರಿ ಗೊಬ್ಬರ) ವ್ಯವಹಾರ ನಡೆದಿತ್ತು. ಉಮಾಶಂಕರ್‌ನಿಂದ 60 ಸಾವಿರ ರೂ. ಮೌಲ್ಯದ ಗೊಬ್ಬರ ಖರೀದಿಸಿದ್ದ ಅರುಣ್ ಕುಮಾರ್, 50 ಸಾವಿರ ರೂ. ನೀಡಿ ಇನ್ನುಳಿದ 10 ಸಾವಿರ ರೂ. ಬಾಕಿ ಉಳಿಸಿಕೊಂಡಿದ್ದ. ಈ ಹಣವನ್ನು ಉಮಾಶಂಕರ್ ಪದೇ ಪದೇ ವಾಪಸ್ ಕೇಳುತ್ತಿದ್ದರು. ಇದೇ ದ್ವೇಷವನ್ನು ಮನಸ್ಸಿನಲ್ಲಿಟ್ಟುಕೊಂಡ ಅರುಣ್ ಕುಮಾರ್, ಉಳಿದ ಆರೋಪಿಗಳೊಂದಿಗೆ ಸಂಚು ರೂಪಿಸಿ ಉಮಾಶಂಕರ್‌ನನ್ನು ಸ್ಥಳಕ್ಕೆ ಕರೆಯಿಸಿಕೊಂಡು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿ ಪರಾ-ರಿಯಾಗಿದ್ದ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾ-ರಿಗಳು (ಖಕ) ತಮ್ಮ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ವರದಿ : ಜಿಲಾನಸಾಬ್ ಬಡಿಗೇರ್

ಬಳ್ಳಾರಿ ಚಲೋ ಪಾದಯಾತ್ರೆ: ಸೋಮಶೇಖರ್ ರೆಡ್ಡಿ, ರೇಣುಕಾಚಾರ್ಯ ಸೇರಿ 22 ಬಿಜೆಪಿ ನಾಯಕರ ವಿರುದ್ಧ FIR

ನೈಜ್ಯ ದೆಸೆ ನ್ಯೂಸ್



ಬಳ್ಳಾರಿ : ರಾಜ್ಯ ಸರ್ಕಾರದ ವಿರುದ್ಧ ಹಮ್ಮಿಕೊಳ್ಳಲಾಗಿದ್ದ 'ಬಳ್ಳಾರಿ ಚಲೋ' ಪಾದಯಾತ್ರೆ ವೇಳೆ ನಿಯಮ ಮೀರಿ ಪ್ರತಿಭಟನೆ ನಡೆಸಿದ ಆರೋಪದ ಮೇಲೆ ಮಾಜಿ ಶಾಸಕರಾದ ಜಿ. ಸೋಮಶೇಖರ ರೆಡ್ಡಿ, ಎಂ.ಪಿ. ರೇಣುಕಾಚಾರ್ಯ ಸೇರಿದಂತೆ 22 ಬಿಜೆಪಿ ನಾಯಕರ ವಿರುದ್ಧ ಪ್ರಕರಣ ದಾಖಲಾಗಿದೆ. ಪಾಲಿಕೆ ವ್ಯಾಪ್ತಿಯಲ್ಲಿ ಬ್ಯಾನರ್ ತೆರವುಗೊಳಿಸಿದ್ದನ್ನು ಖಂಡಿಸಿ ಸೆಪ್ಟೆಂಬರ್ 9ರಂದು ಬಳ್ಳಾರಿ-ಹೊಸಪೇಟೆ ರಾಷ್ಟ್ರೀಯ ಹೆದ್ದಾರಿ 67ರಲ್ಲಿ ರಸ್ತೆ ಸಂಚಾರ ತಡೆದು ಸಾರ್ವಜನಿಕರಿಗೆ ಅಡ್ಡಿಪಡಿಸಿದ ಹಿನ್ನೆಲೆಯಲ್ಲಿ ಬಳ್ಳಾರಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.ಬಿಜೆಪಿ ಬಾವುಟ ಮತ್ತು ಬ್ಯಾನರ್‌ಗಳ ಅಳವಡಿಕೆರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ನಾಯಕರು ಕಮ್ಮರಚೇಡು ಗ್ರಾಮದಿಂದ ಬಳ್ಳಾರಿ ನಗರದವರೆಗೆ ಹಮ್ಮಿಕೊಂಡಿದ್ದ 'ಬಳ್ಳಾರಿ ಚಲೋ' ಪಾದಯಾತ್ರೆಯು ಸೆಪ್ಟೆಂಬರ್ 9 ರಂದು ಬಳ್ಳಾರಿ ನಗರವನ್ನು ತಲುಪಿ ಸಮಾರೋಪ ಗೊಂಡಿತ್ತು. ಪಾದಯಾತ್ರೆಯ ಮಾರ್ಗದುದ್ದಕ್ಕೂ ಪೂರ್ವಾನುಮತಿಯಿಲ್ಲದೆ ಬಿಜೆಪಿ ಬಾವುಟ ಮತ್ತು ಬ್ಯಾನರ್‌ಗಳನ್ನು ಅಳವಡಿಸಲಾಗಿತ್ತು. ಬಿಐಟಿಎಂ ಕಾಲೇಜುವರೆಗೆ ಮಾತ್ರ ಬಾವುಟ ಅಳವಡಿಕೆಗೆ ಅವಕಾಶ ನೀಡಿದ್ದ ಜಿಲ್ಲಾಧಿಕಾರಿಗಳು, ಪಾಲಿಕೆ ವ್ಯಾಪ್ತಿಯಲ್ಲಿ ಬ್ಯಾನರ್ ಅಳವಡಿಸದಂತೆ ನಿಷೇಧಾಜ್ಞೆ ಹೊರಡಿಸಿದ್ದರು.ಸಮಾರೋಪ ಕಾರ್ಯಕ್ರಮದ ಒಂದು ದಿನ ಮುಂಚಿತವಾಗಿಯೇ ನಿಯಮ ಮೀರಿ ಅಳವಡಿಸಲಾಗಿದ್ದ ಬ್ಯಾನರ್ ಮತ್ತು ಬಾವುಟಗಳನ್ನು ಬಳ್ಳಾರಿ ಮಹಾನಗರ ಪಾಲಿಕೆ ಸಿಬ್ಬಂದಿ ತೆರವುಗೊಳಿಸಿದ್ದರು. ಇದು ಬಿಜೆಪಿ ನಾಯಕರ ಮತ್ತು ಆಡಳಿತ ಯಂತ್ರದ ನಡುವೆ ತೀವ್ರ ಜಟಾಪಟಿಗೆ ಕಾರಣವಾಗಿತ್ತು. ಹೆದ್ದಾರಿ ತಡೆದು ಪ್ರತಿಭಟನೆಪಾಲಿಕೆ ಸಿಬ್ಬಂದಿ ಬ್ಯಾನರ್ ತೆರವುಗೊಳಿಸಿದ್ದನ್ನು ಖಂಡಿಸಿ ಆಕ್ರೋಶಗೊಂಡ ಬಿಜೆಪಿ ನಾಯಕರು, ಸೆಪ್ಟೆಂಬರ್ 9 ರಂದು ಬಳ್ಳಾರಿ-ಹೊಸಪೇಟೆ ರಾಷ್ಟ್ರೀಯ ಹೆದ್ದಾರಿ 67 ರಲ್ಲಿ ರಸ್ತೆ ಸಂಚಾರ ತಡೆದು ಧರಣಿ ನಡೆಸಿದ್ದರು. ಸಾರ್ವಜನಿಕ ಸಂಚಾರಕ್ಕೆ ಅಡ್ಡಿಪಡಿಸಿ, ಪೂರ್ವಾನುಮತಿ ಇಲ್ಲದೆ ಪ್ರತಿಭಟನೆ ನಡೆಸಿದ ಹಿನ್ನೆಲೆಯಲ್ಲಿ ಇದೀಗ ಪೊಲೀಸರು 22 ನಾಯಕರ ವಿರುದ್ಧ ಕಾನೂನು ಕ್ರಮ ಜರುಗಿಸಿದ್ದಾರೆ.ವರದಿ : ಜಿಲಾನಸಾಬ್ ಬಡಿಗೇರ್

ಅಕ್ಕ ಮಹಿಳಾ ಕಾನೂನು ಮತ್ತು ರಕ್ಷಣಾ ಪಡೆ: ಯುವ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ರಾಜಬಕ್ಷಿ ನೇಮಕ

ನೈಜ್ಯ ದೆಸೆ ನ್ಯೂಸ್



ಬಳ್ಳಾರಿ / ಕಂಪ್ಲಿ : ಮಹಿಳಾ ಸಬಲೀಕರಣ ಹಾಗೂ ಶೋಷಿತರ ಧ್ವನಿಯಾಗಿ ರಾಜ್ಯಾದ್ಯಂತ ಗುರುತಿಸಿಕೊಂಡಿರುವ ಪ್ರಮುಖ ಸಂಘಟನೆಯಾದ 'ಅಕ್ಕ ಮಹಿಳಾ ಕಾನೂನು ಮತ್ತು ರಕ್ಷಣಾ ಪಡೆ (ನೊಂ.)' ಇದರ ಯುವ ಘಟಕದ ನೂತನ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಶ್ರೀಯುತ ರಾಜಬಕ್ಷಿ @ ಅಬ್ದುಲ್ ರಝಾಖ್ ಅವರನ್ನು ಅಧಿಕೃತವಾಗಿ ನೇಮಕ ಮಾಡಲಾಗಿದೆ. ಸಂಸ್ಥೆಯ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಜನ್ಮಭೂಮಿ ಫೈರೋಝ್ ಖಾನ್ ಅವರು ರಾಜಬಕ್ಷಿ ಅವರ ಸಮಾಜಮುಖಿ ಕಾರ್ಯಗಳು ಮತ್ತು ಸಂಘಟನಾ ಚಾತುರ್ಯವನ್ನು ಗುರುತಿಸಿ ಈ ಮಹತ್ವದ ಜವಾಬ್ದಾರಿಯನ್ನು ವಹಿಸಿದ್ದು, ಈನೇಮಕಾತಿ ಆದೇಶವು ಇಂದಿನಿಂದಲೇ ಜಾರಿಗೆ ಬರುವಂತೆ ಆದೇಶ ಹೊರಡಿಸಿದ್ದಾರೆ.ಸಂಘಟನೆ ನೇಮಕಾತಿ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಸಂಸ್ಥಾಪಕ ರಾಜ್ಯಾಧ್ಯಕ್ಷ ಜನ್ಮಭೂಮಿ ಫೈರೋಝ್ ಖಾನ್ ಅವರು, "ನೂತನ ಪದಾಧಿಕಾರಿಗಳು ಕೂಡಲೇ ರಾಜ್ಯಾದ್ಯಂತ ಪ್ರವಾಸ ಕೈಗೊಳ್ಳುವ ಮೂಲಕ ಸಂಘಟನೆಯನ್ನು ತಳಮಟ್ಟದಿಂದ ಬಲವರ್ಧನೆಗೊಳಿಸಬೇಕಿದೆ. ಹೆಣ್ಣಿನ ಮಾನ, ಪ್ರಾಣ ಹಾಗೂ ಅವರ ಹಕ್ಕುಗಳ ರಕ್ಷಣೆಯೇ ನಮ್ಮ ಸಂಘಟನೆಯ ಪರಮೋಚ್ಚ ಧ್ಯೇಯವಾಗಿದೆ. ಸಮಾಜದಲ್ಲಿ ಮಹಿಳೆಯರ ಮೇಲಾಗುತ್ತಿರುವ ದೌರ್ಜನ್ಯಗಳ ವಿರುದ್ಧ ಹೋರಾಡಲು ಮತ್ತು ಸಂಘಟನೆಯನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯಲು ನೂತನ ಕಾರ್ಯದರ್ಶಿಗಳು ಹಗಲಿರುಳೆನ್ನದೆ ಶ್ರಮಿಸಬೇಕಿದೆ. ಅವರ ಕಾರ್ಯವೈಖರಿಯ ಮೇಲೆ ಸಂಘಟನೆಗೆ ಸಾಕಷ್ಟು ನಿರೀಕ್ಷೆಗಳಿವೆ," ಎಂದು ಆಶಯ ವ್ಯಕ್ತಪಡಿಸಿದ್ದಾರೆ. ರಾಜಬಕ್ಷಿ ರವರು ಯುವ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ನೇಮಕಗೊಂಡ ಹಿನ್ನೆಲೆಯಲ್ಲಿ ರಾಜಬಕ್ಷಿ ಅವರಿಗೆ ಸಂಘಟನೆಯ ಪದಾಧಿಕಾರಿಗಳು, ಮುಖಂಡರು, ಹಿತೈಷಿಗಳು ಹಾಗೂ ಸಾರ್ವಜನಿಕ ವಲಯದಿಂದ ವ್ಯಾಪಕ ಅಭಿನಂದನೆಗಳು ಮತ್ತು ಶುಭ ಹಾರೈಕೆಗಳು ಹ-ರಿದು ಬರುತ್ತಿವೆ.ವರದಿ : ಜಿಲಾನಸಾಬ್ ಬಡಿಗೇರ್

ಜಾಲಹಳ್ಳಿಯಲ್ಲಿ ಸೆ.19ಕ್ಕೆ ಜಿಲ್ಲಾ ಮಟ್ಟದ ಶೈಕ್ಷಣಿಕ ಸಮಾವೇಶ ಹಾಗೂ ಉತ್ತಮ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ

ನೈಜ್ಯ ದೆಸೆ ನ್ಯೂಸ್



ಜಾಲಹಳ್ಳಿ, ಸೆ.13: ರಾಯಚೂರು ಜಿಲ್ಲೆಯ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ಜಿಲ್ಲಾ ಮಟ್ಟದ ಶೈಕ್ಷಣಿಕ ಸಮಾವೇಶ ಹಾಗೂ 2026ನೇ ಸಾಲಿನ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಸೆ.19ರಂದು ಜಾಲಹಳ್ಳಿಯ ಶ್ರೀ ಜಗದಾರಾಧ್ಯ ಜಯಶಾಂತೇಶ್ವರ ಸಭಾಭವನದಲ್ಲಿ ಅದ್ದೂರಿಯಾಗಿ ಆಯೋಜಿಸಲಾಗಿದೆ ಎಂದು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಜಿಲ್ಲಾ ಕಾರ್ಯದರ್ಶಿ, ವಕೀಲ ನಾಗರಾಜ ಮಸ್ಕಿ ತಿಳಿಸಿದರು. ಜಾಲಹಳ್ಳಿಯ ವಿದ್ಯಾಧರೆ ಇಂಗ್ಲಿಷ್ ಮಾಂಟೆಸ್ಸರಿ ಪ್ರಾಥ-ಮಿಕ ಶಾಲೆಯಲ್ಲಿ ಭಾನುವಾರ ಬೆಳಗ್ಗೆ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಪ್ರತಿನಿಧಿಗಳು, ಶಿಕ್ಷಕರು ಹಾಗೂ ಉಪನ್ಯಾಸಕರು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದರು.ಜಿಲ್ಲೆಯ ಪ್ರತಿ ತಾಲೂಕಿನಿಂದ ಪ್ರಾಥಮಿಕ, ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ ಕಾಲೇಜುಗಳ ಒಟ್ಟು 15 ಮಂದಿ ಉತ್ತಮ ಶಿಕ್ಷಕರು ಮತ್ತು ಉಪನ್ಯಾಸಕರನ್ನು ಆಯ್ಕೆ ಮಾಡಿ 2026ನೇ ಸಾಲಿನ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ತಿಳಿಸಿದರು.ಸಮಾವೇಶದಲ್ಲಿ ಜಿಲ್ಲೆಯಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ಕುರಿತು ವಿಚಾರ ವಿನಿಮಯ ಹಾಗೂ ಸಂವಾದ ನಡೆಯಲಿದ್ದು, ರಾಷ್ಟ್ರೀಯ ಶಿಕ್ಷಣ ನೀತಿ (ಓಇಕ) ಹಾಗೂ ರಾಜ್ಯ ಶಿಕ್ಷಣ ನೀತಿ (ಖಇಕ) ಕುರಿತು ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಲಾಗುವುದು ಎಂದು ನಾಗರಾಜ ಮಸ್ಕಿ ವಿವರಿಸಿದರು. ಕಾರ್ಯಕ್ರಮದ ಅಂಗವಾಗಿ ಡಾ. ಸರ್ವಪಳ್ಳಿ ರಾಧಾಕೃಷ್ಣನ್ ಅವರ ಭಾವಚಿತ್ರದ ಮೆರವಣಿಗೆಯನ್ನು ಬಸವೇಶ್ವರ ವೃತ್ತದಿಂದ ಶ್ರೀ ಜಗದಾರಾಧ್ಯ ಜಯಶಾಂತೇಶ್ವರ ಸಭಾಭವನದವರೆಗೆ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.ಶ್ರೀ ಜಗದಾರಾಧ್ಯ ಜಯಶಾಂತೇಶ್ವರ ಮಠದ ಪೂಜ್ಯರು ಕಾರ್ಯಕ್ರಮದ ಸಾನ್ನಿಧ್ಯ ವಹಿಸಲಿದ್ದು, ಜಿಲ್ಲೆಯ ಶಾಸಕರು, ಸಂಸದರು ಹಾಗೂ ವಿಧಾನ ಪರಿಷತ್ ಸದಸ್ಯರು ಭಾಗವಹಿಸುವ ನಿರೀಕ್ಷೆಯಿದೆ. ಸ್ಥಳೀಯ ಶಾಸಕಿ ಕರೆಮ್ಮ ಜಿ. ನಾಯಕ ಅವರ ಅಧ್ಯಕ್ಷತೆಯಲ್ಲಿ ಸಮಾವೇಶ ನಡೆಯಲಿದೆ ಎಂದು ಅವರು ಹೇಳಿದರು.ಜಿಲ್ಲೆಯ ಎಲ್ಲಾ ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿ, ಶಿಕ್ಷಕರು ಹಾಗೂ ಉಪನ್ಯಾಸಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ನಾಗರಾಜ ಮಸ್ಕಿ ಮನವಿ ಮಾಡಿದರು.ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದವರುದೇವದುರ್ಗ ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಶಂಕರಲಿಂಗಯ್ಯ ಸ್ವಾಮಿ, ಹಿರಿಯ ಪತ್ರಕರ್ತ ಮಲ್ಲಿಕಾರ್ಜುನ ದೇಸಾಯಿ, ಉಪಾಧ್ಯಕ್ಷ ಮಾರೆಪ್ಪ ಕೊತ್ತದೊಡ್ಡಿ, ಮಲ್ಲಪ್ಪ ಕುಂಬಾರ, ಮಂಜುನಾಥ ತೋರಣದಿನ್ನಿ, ಮೈಬೂಬ ಕಂದಗಲ್, ಚನ್ನಪ್ಪ ಬೂದಿನಾಳ, ಡಾ. ವಿಜಯರೆಡ್ಡಿ, ಬಸವರಾಜ ಕೊಪ್ಪರ ಸೇರಿದಂತೆ ಹಲವರು ಉಪಸ್ಥಿತರಿದ್ದರು.ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

'ಚಟ್ಟದ ಬಿಕ್ಕು' ಕಥಾಸಂಕಲನಕ್ಕೆ ಕೋಣನೂರು ಅಣ್ಣಯ್ಯ ದತ್ತಿ ಪ್ರಶಸ್ತಿ

ನೈಜ್ಯ ದೆಸೆ ನ್ಯೂಸ್



ಮುದಗಲ್, ಸೆ. 12: ಮುದಗಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಶ್ರೀ ಎಂ.ಡಿ. ಚಿತ್ತರಗಿ ಅವರ ಸಾಹಿತ್ಯಿಕ ಸಾಧನೆಗೆ ಪ್ರತಿಷ್ಠಿತ ಗೌರವವೊಂದು ಸಂದಿದೆ. ಅವರ 'ಚಟ್ಟದ ಬಿಕ್ಕು' ಕಥಾಸಂಕಲನವು ಹಾಸನದ ಮಾಣಿಕ್ಯ ಪ್ರಕಾಶನದ ವತಿಯಿಂದ ನೀಡಲಾಗುವ 2026ನೇ ಸಾಲಿನ ಕೋಣನೂರು ಅಣ್ಣಯ್ಯ ದತ್ತಿ ಪ್ರಶಸ್ತಿಗೆ ಆಯ್ಕೆಯಾಗಿದೆ.ಸಾಹಿತ್ಯ ಕ್ಷೇತ್ರದಲ್ಲಿ ತಮ್ಮದೇ ಆದ ಅಭಿವ್ಯಕ್ತಿ ಹಾಗೂ ಕಥನ ಶೈಲಿಯ ಮೂಲಕ ಗಮನ ಸೆಳೆಯುತ್ತಿರುವ ಎಂ.ಡಿ. ಚಿತ್ತರಗಿ ಅವರು ಬೋಧನಾ ವೃತ್ತಿಯ ಜತೆಗೆ ಸೃಜನಶೀಲ ಬರವಣಿಗೆಯಲ್ಲಿಯೂ ನಿರಂತರವಾಗಿ ತೊಡಗಿಸಿಕೊಂಡಿದ್ದಾರೆ. ಅವರ ಬರಹಗಳಲ್ಲಿ ಸಮಾಜದ ವಾಸ್ತವ ಬದುಕು, ಮಾನವೀಯ ಸಂಬಂಧಗಳು, ಬದುಕಿನ ಸಂಘರ್ಷಗಳು ಹಾಗೂ ಸಾಮಾನ್ಯ ಜನರ ಭಾವನೆಗಳಿಗೆ ಮಹತ್ವದ ಸ್ಥಾನ ದೊರೆತಿದೆ.'ಚಟ್ಟದ ಬಿಕ್ಕು' ಕಥಾಸಂಕಲನವು ಬದುಕಿನ ವಿವಿಧ ಮಗ್ಗುಲುಗಳನ್ನು ಸೂಕ್ಷ್ಮವಾಗಿ ಅವಲೋಕಿಸುವ ಕಥೆಗಳ ಮೂಲಕ ಓದುಗರನ್ನು ಚಿಂತನೆಗೆ ಹಚ್ಚುವ ಕೃತಿಯಾಗಿ ಗುರುತಿಸಿಕೊಂಡಿದೆ. ಸಾಮಾಜಿಕ ವಾಸ್ತವತೆಯನ್ನು ಸರಳ ಹಾಗೂ ಪರಿಣಾಮಕಾರಿ ಕಥನದ ಮೂಲಕ ಕಟ್ಟಿಕೊಡುವ ಪ್ರಯತ್ನ ಈ ಕೃತಿಯಲ್ಲಿ ಕಂಡುಬರುತ್ತದೆ.ಬೋಧಕರಾಗಿ, ಸಾಹಿತಿಯಾಗಿ ಗುರುತಿಸಿಕೊಂಡಿರುವ ಚಿತ್ತರಗಿ ಶಿಕ್ಷಣ ಕ್ಷೇತ್ರದಲ್ಲಿ ವಿದ್ಯಾರ್ಥಿಗಳೊಂದಿಗೆ ನಿರಂತರವಾಗಿ ಒಡನಾಟ ಹೊಂದಿರುವ ಎಂ.ಡಿ. ಚಿತ್ತರಗಿ ಅವರು ಸಾಹಿತ್ಯವನ್ನು ಕೇವಲ ಓದುವ ಅಥವಾ ಬರೆಯುವ ಚಟುವಟಿಕೆಯಾಗಿ ನೋಡದೆ, ಸಮಾಜವನ್ನು ಅರ್ಥಮಾಡಿಕೊಳ್ಳುವ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಮಾಧ್ಯಮವಾಗಿ ಪರಿಗಣಿಸಿರುವುದು ಅವರ ಬರಹಗಳಲ್ಲಿಯೂ ಪ್ರತಿಫಲಿಸುತ್ತದೆ.ಗ್ರಾಮೀಣ ಭಾಗದ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಾ ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆ ಮಾಡಿರುವುದು ವಿಶೇಷವಾಗಿದ್ದು, ಇದು ಸ್ಥಳೀಯ ಯುವಕರು ಹಾಗೂ ವಿದ್ಯಾರ್ಥಿಗಳಲ್ಲಿಯೂ ಸಾಹಿತ್ಯದ ಬಗ್ಗೆ ಆಸಕ್ತಿ ಮೂಡಿಸಲು ಪ್ರೇರಣೆಯಾಗಲಿದೆ.ಕಾಲೇ-ಜಿಗೆ ಹೆಮ್ಮೆಯ ಕ್ಷಣತಮ್ಮ ಸಹೋದ್ಯೋಗಿಯ ಸಾಹಿತ್ಯ ಸಾಧನೆಗೆ ಸಂತಸ ವ್ಯಕ್ತಪಡಿಸಿರುವ ಮುದಗಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಎಂ.ಡಿ. ಚಿತ್ತರಗಿ ಅವರನ್ನು ಅಭಿನಂದಿಸಿದ್ದಾರೆ.ಪ್ರಶಸ್ತಿ ದೊರೆತಿ-ರುವುದು ವೈಯಕ್ತಿಕ ಸಾಧನೆಯಷ್ಟೇ ಅಲ್ಲದೆ, ಮುದಗಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇ-ಜಿಗೂ ಹೆಮ್ಮೆಯ ಸಂಗತಿಯಾಗಿದೆ ಎಂದು ಅವರು ಸಂತಸ ವ್ಯಕ್ತಪಡಿಸಿದ್ದಾರೆ.ಸಾಹಿತ್ಯ ಕ್ಷೇತ್ರದಲ್ಲಿ ಅವರು ಇನ್ನಷ್ಟು ಕೃತಿಗಳನ್ನು ರಚಿಸಿ, ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ಮುಂದುವರಿಸಲಿ ಹಾಗೂ ಮುಂದಿನ ದಿನಗಳಲ್ಲಿ ಇನ್ನಷ್ಟು ಪ್ರತಿಷ್ಠಿತ ಗೌರವಗಳು ಅವರಿಗೆ ಲಭಿಸಲಿ ಎಂದು ಕಾಲೇಜಿನ ಸಮಸ್ತ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಶುಭ ಹಾರೈಸಿದ್ದಾರೆ.ಸಾಹಿತ್ಯ ಪಯಣಕ್ಕೆ ಹೊಸ ಪ್ರೇರಣೆಕೋಣನೂರು ಅಣ್ಣಯ್ಯ ದತ್ತಿ ಪ್ರಶಸ್ತಿಗೆ 'ಚಟ್ಟದ ಬಿಕ್ಕು' ಕಥ-ಾಸಂಕಲನ ಆಯ್ಕೆಯಾಗಿರುವುದು ಶ್ರೀ ಎಂ.ಡಿ. ಚಿತ್ತರಗಿ ಅವರ ಸಾಹಿತ್ಯ ಪಯಣದಲ್ಲಿ ಮತ್ತೊಂದು ಮಹತ್ವದ ಮೈಲಿಗಲ್ಲು. ಈ ಗೌರವವು ಅವರ ಸೃಜನಶೀಲತೆಗೆ ಮತ್ತಷ್ಟು ಉತ್ತೇಜನ ನೀಡುವುದರ ಜೊತೆಗೆ, ಗ್ರಾಮೀಣ ಪ್ರದೇಶದಲ್ಲಿ ಸಾಹಿತ್ಯ ಕೃಷಿ ಮಾಡುತ್ತಿರುವ ಬರಹಗಾರ-ರಿಗೆ ಹೊಸ ಆತ್ಮವಿಶ್ವಾಸವನ್ನು ನೀಡುವಂತಾಗಿದೆ.

ಕ್ಷೇತ್ರದ ಪ್ರತಿ ಗ್ರಾಮ ಹಾಗೂ ತಾಂಡಾಗಳ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗುತ್ತಿದೆ- ಶಾಸಕ ವಜ್ಜಲ್

ನೈಜ್ಯ ದೆಸೆ ನ್ಯೂಸ್



ಲಿಂಗಸಗೂರು . ಸೆ. 14 – ತಾಲೂಕಿನ ಪ್ರತಿಯೊಂದು ಗ್ರಾಮಗಳ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಲ್ಲಿ ಪ್ರಾಮಾಣಿಕವಾಗಿ ಪ್ರಯತ್ನ ಮಾಡುತ್ತಿದ್ದು ಆದರೆ ರಾಜ್ಯ ಕಾಂಗ್ರೆಸ್ ಸರ್ಕಾರದಿಂದ ಕ್ಷೇತ್ರ ಅಭಿವೃದ್ಧಿ ಪಡಿಸಲು ಸರ್ಕಾರದಲ್ಲಿ ಹಣದ ಕೊರತೆಯಿಂದಾಗಿ ಹೆಚ್ಚು ಪ್ರಮಾಣದಲ್ಲಿ ಅಭಿವೃದ್ಧಿಪಡಿಸಲು ಸಾಧ್ಯವಾಗದಿದ್ದರೂ ಲಭ್ಯವಿರುವ ಕೆ ಕೆ ಆರ್ ಡಿ ಬಿ ಅನುದಾನದಲ್ಲಿ ಕ್ಷೇತ್ರದ ಪ್ರತಿಯೊಂದು ಗ್ರಾಮ ಮತ್ತು ತಾಂಡಾಗಳ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗುತ್ತಿದೆ ಎಂದು ಶಾಸಕ ಮಾನಪ್ಪ ವಜ್ಜಲ್ ಹೇಳಿದರು.ಅವರಿಂದು ತಾಲೂಕಿನ ಹಿರೇ ಉಪ್ಪೇರಿ, ಹಾಲಬಾವಿ ಈಚನಾಳ ತಾಂಡ , ಮಿಂಚೇರಿ ತಾಂಡ1ಹಾಗೂ 2 ಸೇರಿದಂತೆ ಸುಮಾರು 6 ಹಳ್ಳಿಗಳಿಗೆ ಕೆಕೆಆರ್ ಡಿ ಬಿ ಯಲ್ಲಿ ಲಭ್ಯವಿದ್ದ 2025-26 ನೇ ಸಾಲಿನ ಟಿ ಎಸ್‌ಪಿ ಮೈಕ್ರೋ ಯೋಜನೆ ಅನುದಾನ ಸುಮಾರು 4 ಕೋಟಿ ರೂಪಾಯಿಗಳಲ್ಲಿ ಸಿಸಿ ರಸ್ತೆ ಕಾಮಗಾರಿ ಹೈ ಮಾಸ್ ದೀಪ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು ನಮ್ಮ ಲಿಂಗಸಗೂರು ಕ್ಷೇತ್ರ ಅಭಿವೃದ್ಧಿಗೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಅನುದಾನ ವರದಾನದ ಫಲವಾಗಿ. ಇಂದು ಎಸ್ಸಿಪಿ, ಟಿಎಸ್‌ಪಿ, ಯೋಜನೆಯಲ್ಲಿ ಕ್ಷೇತ್ರ ಅಭಿವೃದ್ಧಿಯತ್ತ ಕೊಂಡೊಯ್ಯಲು ಸಾಧ್ಯವಾಗುತ್ತಿದೆ. ಗ್ರಾಮೀಣ ಮತ್ತು ಪಟ್ಟಣ ಸೇರಿದಂತೆ ಮೂಲಭೂತ ಸೌಕರ್ಯಗಳಾದ ಸಿಸಿ ರಸ್ತೆ, ಅಂಗನವಾಡಿ ಕೇಂದ್ರ, ಸಮುದಾಯ ಭವನ, ಐ ಮಾಸ್ ದೀಪ ಗಳು. ಸೇ-ರಿದಂತೆ ಬಹು ಮುಖ್ಯವಾಗಿ ಕುಡಿಯುವ ನೀರಿಗಾಗಿ ಆದ್ಯತೆ ನೀಡಲಾಗಿದ್ದು ಈ ಎಲ್ಲಾ ಕಾಮಗಾರಿ ಅತ್ಯಂತ ಕಾರ್ಯ ಕ್ಷಮತೆಯಿಂದ ಕಾಮಗಾರಿಗಳನ್ನ ಕೈಗೊತ್ತಿಕೊಂಡಿದ್ದು ಬರುವ ಡಿಸೆಂಬರ್ ಒಳಗಾಗಿ ಕಾಮಗಾರಿಗಳನ್ನು ಮುಗಿಸುವ ಯೋಚನೆಯಿದ್ದು ಆದಷ್ಟು ಬೇಗನೆ ಅನುದಾನ ನೀಡಿ ಈ ಕಾಮಗಾ-ರಿಗಳನ್ನು ತ್ವರಿತವಾಗಿ ನಿರ್ವಹಿಸಲು ಲೋಕಪಯೋಗಿ ಇಲಾಖೆಗೆ ನೀಡಿದ್ದು, ಈ ಕಾಮಗಾರಿಗಳನ್ನು ಗುಣಮಟ್ಟದಿಂದ ನಿರ್ವಹಿಸುವಂತೆ ನೋಡಿಕೊಳ್ಳುವುದು ಗ್ರಾಮದ ಪ್ರತಿಯೊಬ್ಬರ ಕರ್ತವ್ಯವಾಗಿದೆ. ಆದಷ್ಟು ಶೀಘ್ರ ಈ ಕಾಮಗಾರಿ ಗುಣಮಟ್ಟದ್ದಾಗಿ ಮುಗಿಸಬೇಕೆಂದು ಇಲಾಖೆ ಅಧಿಕಾರಿಗಳಿಗೆ ಮತ್ತು ಗುತ್ತಿಗೆದಾರರಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ. ಬಿಜೆಪಿ ತಾಲೂಕ ಅಧ್ಯಕ್ಷ ನಾಗಭೂಷಣ ಕೆ . ಮುಖಂಡರಾದ ಗಿರಿಮಲ್ಲನಗೌಡ ಕರಡಕಲ್. ವೆಂಕಟೇಶ್ ರಾಠೋಡ್, ಲಿಂಗಣ್ಣ ದೇವಿಕೇರಿ,ಗೋವಿಂದ ಕಾರಭಾರಿ. ಶಂಕರ್ ಚವಾಣ್ಣ.ದೊಡ್ಡಬಸಪ್ಪ ಅಂಗಡಿ, ವೆಂಕನಗೌಡ ಐದನಾಳ, ಜೀವಲೆಪ್ಪ ನಾಯಕ್. ಅಯ್ಯಪ್ಪ ಮಾಳೂರ, ನಾರಾಯಣಪ್ಪ ನಾಯಕ್,ಲಿಂಗರಾಜ್ ಯರಗುಂಟಿ,ಶರಣಪ್ಪ ಗೋನವಾರ. ಶಾಸಕರ ಆಪ್ತ ಸಹಾಯಕ ಪಕಿರಪ್ಪ ಕುರಿ . ಲೋಕೋಪ ಯೋಗಿ ಎಇಇ. ಜ್ಯೋತಿ ಪ್ರಕಾಶ್,ಎ ಇ ಯಾಸ್ಮಿನ್, ಬಸವರಾಜ್ ಬಸ್ತಾನಿ ಸೇರಿದಂತೆ ಗುತ್ತೇದಾರರು ಹಾಗೂ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.